ಸಂಪುಟ 01 | ಸಂಚಿಕೆ 72 | ಶನಿವಾರ 24 ಜನವರಿ 2026 | ಪುಟ 4 | ಬೆಲೆ-2 ರೂ.

ಇರ್ಫಾನ್ ಕೆ
ಸಂಪಾದಕರು

M A ವಹಾಬ್
ಪ್ರಧಾನ ಸಂಪಾದಕರು


# ನೈಜ್ಯ ದೆಸೆ

NAIJYA DESE

ಸತ್ಯದ ದಿಕ್ಕು TRUE PATH

ಕನ್ನಡ ದಿನ ಪತ್ರಿಕೆ

REGIONAL KANNADA DAILY MORNING

ಸಿಂಧನೂರು, ಮಸ್ಕಿ ಮಾನ್ವಿ, ಲಿಂಗಸೂರು, ರಾಯಚೂರ,ದೇವದುರ್ಗ ಬಳ್ಳಾರಿ, ಕೊಪ್ಪಳ ಯಾದಗಿರಿ, ಕಲಬುರ್ಗಿ, ಬೀದರ, ವಿಜಯಪುರ. ಗದಗ, ವಿಜಯನಗರ. ಏಕಕಾಲಕ್ಕೆ ಪ್ರಕಟಣೆ

RNI code: KNKAN/25/A3581 ಮೋ: 9902277588, 9880707587, 9008787586 naijyadese@gmail.com


## ಈ ದಿನದ ವಿಶೇಷ

**1) ರಾಷ್ಟ್ರೀಯ ಹೆಣ್ಣು ಮಕ್ಕಳ ದಿನ**

ಪ್ರತಿ ವರ್ಷ ಜನವರಿ 24 ರಂದು, ಭಾರತದಲ್ಲಿ ಬಹುಪಾಲು ಹುಡುಗಿಯರು ಎದುರಿಸುತ್ತಿರುವ ಅಸಮಾನತೆಗಳು, ಶಿಕ್ಷಣ, ಪೋಷಣೆ, ಕಾನೂನು ಹಕ್ಕುಗಳು, ವೈದ್ಯಕೀಯ ಆರೈಕೆ ಮತ್ತು ಹೆಣ್ಣು ಮಕ್ಕಳ ಸುರಕ್ಷತೆ ಇತ್ಯಾದಿಗಳ ಮಹತ್ವವನ್ನು ಎತ್ತಿ ತೋರಿಸಲು ರಾಷ್ಟ್ರೀಯ ಹೆಣ್ಣು ಮಕ್ಕಳ ದಿನವನ್ನು ಆಚ–ರಿಸಲಾಗುತ್ತದೆ.

**2) ಅಂತರರಾಷ್ಟ್ರೀಯ ಶಿಕ್ಷಣ ದಿನ**

ಎಲ್ಲರಿಗೂ ಒಳಗೊಳ್ಳುವ, ಸಮಾನ ಮತ್ತು ಗುಣಮಟ್ಟದ ಶಿಕ್ಷಣಕ್ಕಾಗಿ ಪರಿವರ್ತನಾತ್ಮಕ ಕ್ರಮಗಳನ್ನು ಬೆಂಬಲಿಸಲು ಪ್ರತಿ ವರ್ಷ ಜನವರಿ 24 ರಂದು ಅಂತರರಾಷ್ಟ್ರೀಯ ಶಿಕ್ಷಣ ದಿನವನ್ನು ಆಚರಿಸಲಾಗುತ್ತದೆ.

## ಸುಭಾಷಿತ

ಮನುಷ್ಯ ತನ್ನ ತಪ್ಪನ್ನು ಒಪ್ಪಿಕೊಳ್ಳುವಷ್ಟು ದೊಡ್ಡವನಾದಾಗಲೇ ಅವನೊಳಗಿನ ಅಹಂಕಾರ ಸಣ್ಣದಾಗುತ್ತದೆ. ಅಹಂಕಾರ ಕರಗಿದಾಗ ಆತ್ಮದ ಬೆಳಕು ತಾನೇ ಹೊಳೆಯುತ್ತದೆ

~ ಶ್ರೀ ಸಿದ್ಧೇಶ್ವರ ಸ್ವಾಮೀಜಿ

# ತಮ್ಮ ಅಕ್ರಮ ಮುಚ್ಚಿಕೊಳ್ಳಲು ವಿಬಿ ಜಿ ರಾಮ್ ಜಿ ಬಗ್ಗೆ ಕಾಂಗ್ರೆಸ್ ಚರ್ಚೆ :ಹೆಚ್ಡಿಕೆ

**ಮಂಡ್ಯ: ರಾಜ್ಯಪಾಲರ ವಿರುದ್ಧ ಗೋ ಬ್ಯಾಕ್ ಗೋ ಬ್ಯಾಕ್ ಎನ್ನುತ್ತಿರುವ ರಾಜ್ಯ ಕಾಂಗ್ರೆಸ್ ಏನು ಸಾಧಿಸುವುದಿಲ್ಲ. ಗೋ ಬ್ಯಾಕ್ ಗವರ್ನರ್ ಅನ್ನೋದು ಕೇವಲ ರಾಜಕೀಯ ನಾಟಕ ಎಂದು ಕೇಂದ್ರ ಸಚಿವ ಹೆಚ್.ಡಿ. ಕುಮಾರಸ್ವಾಮಿ ಅವರು ಗಂಭೀರ ಆರೋಪ ಮಾಡಿದರು.ಬದಲಿಗೆ ಕಳೆದ ಎರಡೂ ಮುಕ್ಕಾಲು ವರ್ಷಗಳಲ್ಲಿ ನಡೆಸಿರುವ ಅನ್ಯಾಯ, ಅಕ್ರಮಗಳನ್ನು ಮರೆಮಾಚಲು ವಿಬಿ ಜಿ ರಾಮ್ ಜಿ ಯೋಜನೆಯ ಬಗ್ಗೆ ಕಾಂಗ್ರೆಸ್ ಸರ್ಕಾರ ಅಪಪ್ರಚಾರ ಮಾಡುತ್ತಿದೆ ಎಂದು ಅವರು ದೂರಿದರು.**

ಮೇಲುಕೋಟೆ ವಿಧಾನಸಭೆ ಕ್ಷೇತ್ರದ ಶಿವಳ್ಳಿ ಗ್ರಾಮದಲ್ಲಿ ನೂತನವಾಗಿ ನಿರ್ಮಾಣ ಮಾಡಿರುವ ಶ್ರೀ ಮಾರಮ್ಮ ದೇವಿ ದೇವಾಲಯ ಉದ್ಘಾಟನೆ ನಂತರ ಕೇಂದ್ರ ಸಚಿವರು ಮಾಧ್ಯಮಗಳ ಜತೆ ಮಾತನಾಡಿದರು. ಈ ಹಿಂದೆ ಕಾಂಗ್ರೆಸ್ ರಾಜ್ಯಪಾಲರುಗಳ ವಿಷಯದಲ್ಲಿ ಹೇಗೆ ನಡೆದುಕೊಂಡಿತ್ತು ಎಂಬುದರ ಬಗ್ಗೆ ಒಮ್ಮೆ ನೆನಪು ಮಾಡಿಕೊಂಡರೆ ಅವರ ಬಣ್ಣ ಏನೆಂದು ಗೊತ್ತಾಗುತ್ತದೆ. ವಿಶೇಷ ಅಧಿವೇಶನ ಕರೆದು ಅಲ್ಲಿ ಸಮಯ ಪೋಲು ಮಾಡುತ್ತಿದ್ದಾರೆ. ರಾಜ್ಯಪಾಲರು ಭಾಷಣ ಓದದಿರುವ ಅಥವಾ ಮೊಟಕುಗೊಳಿಸಿರುವ ಘಟನೆ ಇದೇ ಮೊದಲ ಬಾರಿ ನಡೆದಿದ್ದು ಅಲ್ಲ.

ಜೆ.ಹೆಚ್. ಪಟೇಲರು ಸಿಎಂ ಆಗಿದ್ದಾಗ



ಡಿಸಿಎಂ ಆಗಿದ್ದ ಸಿದ್ದರಾಮಯ್ಯ ಅವರು ಅಂದಿನ ಸಂದರ್ಭವನ್ನು ನೆನಪು ಮಾಡಿಕೊಳ್ಳಬೇಕು. ಈಗ ನೋಡಿದರೆ ಅನಗತ್ಯವಾಗಿ ವಿಧಾನಸಭೆ ಕಲಾಪದಲ್ಲಿ ಸಂಘರ್ಷ ನಡೆಯುತ್ತಿದೆ.ಈ ಸಂಘರ್ಷಗಳಿಂದ ರಾಜ್ಯದ ಸಮಸ್ಯೆಗಳಿಗೆ ಪರಿಹಾರ ಸಿಗುತ್ತದಾ? ಗೋ ಬ್ಯಾಕ್ ಗವರ್ನರ್ ಅನ್ನೋದು ಕೇವಲ ರಾಜಕೀಯ ನಾಟಕ ಎಂದು ಕೇಂದ್ರ ಸಚಿವರು ಆಕ್ರೋಶ ವ್ಯಕ್ತಪಡಿಸಿದರು. ಮನರೇಗಾ ವಿಷಯ ಇಟ್ಟಿಕೊಂಡು ಕೇಂದ್ರ ಸರ್ಕಾರವನ್ನು ನಿಂದಿಸುವುದು ಈ ಸರ್ಕಾರದ ಉದ್ದೇಶ. ಅದಕ್ಕಾಗಿಯೇ ವಿಶೇಷ ಅಧಿವೇಶನ ಕರೆದಿದ್ದಾರೆ ಎಂದ ಕೇಂದ್ರ ಸಚಿವರು; ಪದೇ ಪದೇ ದಲಿತರ ಹೆಸರು ಬಳಸಿ ತಮ್ಮ ಸ್ಥಾನಮಾನ ಗಟ್ಟಿಗೊಳಿಸುವ ಪ್ರಯತ್ನದಲ್ಲಿದ್ದಾರೆ. ಕಾಂಗ್ರೆಸ್ ಸರ್ಕಾರ ಪರಿಶಿಷ್ಟ ಜಾತಿ, ವರ್ಗದ ಜನರಿಗೆ ಮೀಸಲಿಟ್ಟಿದ್ದ ಹಣವನ್ನು ಗ್ಯಾರಂಟಿಗಳಿಗೆ ಬಳಸಿದ್ದಾರೆ. ಇದು ದಲಿತರ ಉದ್ಧಾರವೇ ಎಂದು ಕಿಡಿಕಾರಿದರು.

ಈ ಸರ್ಕಾರದಲ್ಲಿ ಹಲವಾರು ಅಕ್ರಮಗಳು ನಡೆದಿದೆ. ಕಾನೂನು ಬಾಹಿರ ನಿರ್ಧಾರಗಳ ಬಗ್ಗೆ ರಾಜ್ಯಪಾಲರು ಕ್ರಮ ಕೈಗೊಳ್ಳುವ ಅವಕಾಶ ಇದ್ದರೂ ರಾಜ್ಯಪಾಲರು ಬೇರೆ ರಾಜ್ಯಗಳ ರಾಜ್ಯಪಾಲರ ರೀತಿ ನಮ್ಮ ಸರ್ಕಾರದ ಜತೆ ಸಂಘರ್ಷ ಮಾಡಲಿಲ್ಲ. ಅದನ್ನು ಈ ಸರಕಾರ ಅರ್ಥ ಮಾಡಿಕೊಂಡಿಲ್ಲ. ಕೇಂದ್ರ ಸರ್ಕಾರದ ಜತೆ ರಾಜ್ಯ ಸರ್ಕಾರ ವಿಶ್ವಾಸದಲ್ಲಿ ಇಲ್ಲ. ಕೇಂದ್ರದ ಅನುದಾನದ ಬಗ್ಗೆ ರಾಜ್ಯ ಸರ್ಕಾರ ಪಾರದರ್ಶಕವಾಗಿ ಮಾಡಿಕೊಂಡಿಲ್ಲ. ಇವರ ತಪ್ಪಿನಿಂದ ಕೆಲ ರಾಷ್ಟ್ರೀಯ ಹೆದ್ದಾರಿ ಯೋಜನೆಗಳು ವಾಪಸ್ ಹೋಗಿವೆ. ಇದಕ್ಕೆ ಹೊಣೆ ಯಾರು? ಎಂದು ಅವರು ಪ್ರಶ್ನಿಸಿದರು. ರೈತರಿಗೆ ಈ ಸರಕಾರ ಸರಣಿ ಅನ್ಯಾಯ ಮಾಡಿದೆ. ಬೆಳೆ ಬೆಳೆದ ರೈತರನ್ನ ಇವರು ಕಾಪಾಡಿದ್ದೀರಾ? ಕೇಂದ್ರ ಸರ್ಕಾರ ಅನುಮತಿ ಕೊಟ್ಟ ಮಾನದಂಡದಲ್ಲಿ ಎಷ್ಟು ಬೆಳೆ ಖರೀದಿ ಮಾಡಿದ್ದೀರಿ ಎಂಬುದನ್ನು ಹೇಳಲಿ? ಮಾವಿನ ಬೆಲೆ ಕುಸಿದಾಗ ಕೇಂದ್ರ ಸರ್ಕಾರದ ಮುಂದೆ ಇವರು ಅರ್ಜಿ ಹಿಡಿದುಕೊಂಡು ಹೋಗಿದ್ದರು. ನಾನು ಸಿಎಂ ಆಗಿದ್ದಾಗ ಮಾವು ಬೆಲೆ ಕುಸಿದಾಗ ರಾಜ್ಯ ಸರ್ಕಾರದ ವತಿಯಿಂದಲೇ ಹಣ ಕೊಟ್ಟೆ. ಇವರಿಗೆ ಕೆಲಸ ಮಾಡಲು ಆಗುತ್ತಿಲ್ಲ, ಆದರೆ ಕೇಂದ್ರವನ್ನು ನಿಂದಿಸಲು ನೆಪ ಹುಡುಕುತ್ತಾರೆ ಎಂದು ಕಟುವಾಗಿ ಟೀಕಿಸಿದರು.

## ಜಿಲ್ಲಾ ಸಂಯೋಜಕರಾಗಿ ಹುಸೇನ್ ಭಾಷಾ ತಿಪ್ಪನಟ್ಟಿ ನೇಮಕ


MANU JAIN NATIONAL HEAD IYC SOCIAL MEDIA
INDIAN YOUTH CONGRESS
OFFICE: 5 RAISINA ROAD, NEW DELHI - 110001

District Coordinators

| Coordinators | District |
|---|---|
| Asif Pasha | Mysore |
| Chandra Shekar | Raichur |
| Khalid Saifulla | Raichur |
| M.Babu | Raichur |
| Moula sab | Raichur |
| Hussain Basha | Raichur |
| Bhimanna Shaki | Raichur |
| Prasanna Alampalli | Raichur |
| Sanjeevappa Chalavadi | Raichur |
| Kumar | Raichur |
| Zikro khan | Raichur |
| Vinit P | Bangalore South |
| K Prabhakar | Bangalore South |
| Karthik | Davanagere |
| Shankar Bhosale | Chikkodi |
| Prashant B Patil | Chikkodi |
| Santosh Bhandari | Chikkodi |
| Ruksan Bepari | Hubli Dharwad City |
| Mohammed Rehan | Yadgir |
| Amaan Bin Abubakar | Yadgir |
| Beerlinga | Yadgir |

❑ ನೈಜ್ಯ ದೆಸೆ ನ್ಯೂಸ್

ರಾಯಚೂರು: ಸಿಂಧನೂರು ತಾಲೂಕು ಅತೀ ಸಣ್ಣಗ್ರಾಮ ವಾದ ತಿಪ್ಪನಟ್ಟಿ ಗ್ರಾಮದ ಯುವ ಕಾಂಗ್ರೆಸ್ ಮುಖಂಡನಾದ ಹುಸೇನ್ ಬಾಷಾ ತಿಪ್ಪನಹಟ್ಟಿ ರಾಯಚೂರು ಜಿಲ್ಲಾ ಸಾಮಾಜಿಕಜಾಲತಾಣ ಸಂಂ–ಯೋಜಕರಾಗಿ ನೇಮಕವಾಗಿದ್ದು, ಕಾಂಗ್ರೆಸ್ ಪಕ್ಷದ ಕಟ್ಟಾಳಾಗಿದ್ದು ಸಾಮಾಜಿಕ ಜಾಲತಾಣಗಳಲ್ಲಿ ಸಕ್ರಿಯವಾಗಿ ನಿರಂತರ ಕಾರ್ಯನಿರ್ವಾಹಿಸುವ



ಹುಸೇನ್ ಬಾಷಾ ಗೆ ರಾಯಚೂರು ಜಿಲ್ಲಾ ಸಾಮಾಜಿ–ಕ ಜಾಲತಾಣ ರಾಷ್ಟ್ರೀಯ ಅಧ್ಯಕ್ಷರಾದ ಮನು ಜೈನ್ ಆದ–ೇಶ ಹೊರಡಿಸಿದ್ದಾರೆ. ಕರ್ನಾಟಕ ಯುವ ಕಾಂಗ್ರೆಸ್ ಪಕ್ಷದ ಸಾಮಾಜಿಕ ಜಾಲತಾಣಗಳ ನೂತನ ಪದಾಧಿಕಾರಿಗಳಾಗಿ ನೇಮಕಗೊಂಡಿರುವ ಎಲ್ಲಾ ಯುವ ಕಾಂಗ್ರೆಸ್ ನೇತಾರರಿಗೆ ಅಭಿನಂದನೆಗಳು.

## ಮಸ್ಕಿಯಲ್ಲಿ ಶಕ್ತಿ ಆರಾಧನೆಯ ಮಹಾಸಂಭ್ರಮ | ಶ್ರೀ ಕಾಳಿಕಾದೇವಿಯ 12ನೇ ವಾರ್ಷಿಕೋತ್ಸವ ವೈಭವ



❑ ನೈಜ್ಯ ದೆಸೆ ನ್ಯೂಸ್

**ಮಸ್ಕಿ: ಮಸ್ಕಿ ಪಟ್ಟಣದ ಶಕ್ತಿ ದೇವತೆ ಶ್ರೀ ಕಾಳಿಕಾದೇವಿಯ 12ನೇ ವಾರ್ಷಿಕೋತ್ಸವ ಭಕ್ತಿಭಾವ,ಸಂಪ್ರದಾಯ ಹಾಗೂ ಸಂಭ್ರಮದಿಂದ ವಿಜೃಂಭಣೆಯಿ ಜರುಗಿತು.**

ಶುಕ್ರವಾರ ಬೆಳಿಗ್ಗೆ ನಾನಾ ವಿಧದ ಪುಷ್ಪಾಲಂಕಾರಗಳಿಂದ ಶೃಂಗಾರಗೊಂಡ ಶ್ರೀ ಕಾಳಿಕಾದೇವಿಯ ಪಲ್ಲಕ್ಕಿ ಮೆರವಣಿಗೆ ದೇವಸ್ಥಾನದಿಂದ ಆರಂಭಗೊಂಡು ವಿಶ್ವಕರ್ಮ ವೃತ್ತ, ಅಶೋಕ ವೃತ್ತ ಮಾರ್ಗವಾಗಿ ಆಂಜನೇಯ ದೇವಸ್ಥಾನಕ್ಕೆ ತಲುಪಿತು. ಅಲ್ಲಿ ಮಹಾಮಜ್ಜನ ಕಾರ್ಯಕ್ರಮ ನಡೆಯಿತು. ಮುತ್ತೈದೆಯರು ಗಂಗಾಜಲ ಪೂಜೆ ನೆರವೇರಿಸಿ, ಕುಂಭ ಹೊತ್ತು ಮಹಿಳೆಯರು ಭಕ್ತಿಯಿಂದ ಮೆರವಣಿಗೆಯಲ್ಲಿ ಭಾಗವಹಿಸಿದರು. ಪುರವಂತಿಕೆ ಕಲಾತಂಡದವರು ಒಡುಪು ಹೇಳುತ್ತ ಭಕ್ತರನ್ನು ಆನಂದದಲ್ಲಿ ತೊಡಗಿಸಿದರು.

ನಂತರ ಪುನಃ ಆಂಜನೇಯ ದೇವಸ್ಥಾನದಿಂದ ಪ್ರಾರಂಭವಾದ ಮೆರವಣಿಗೆ ಅಶೋಕ ವೃತ್ತ, ಅಗಸಿ, ಕಲೀಲ ವೃತ್ತ, ದೈವದ ಕಟ್ಟೆ ಸೇರಿದಂತೆ ಪಟ್ಟಣದ ಪ್ರಮುಖ ಬೀದಿಗಳ ಮೂಲಕ ಸಂಚರಿಸಿ ಶ್ರೀ ಕಾಳಿಕಾದೇವಿ ದೇವಸ್ಥಾನಕ್ಕೆ ತಲುಪಿತು. ದೇವಾಲಯದಲ್ಲಿ ಶ್ರೀ ಕಾಳಿಕಾದೇವಿಗೆ ಪಂಚಾಮೃತಾಭಿಷೇಕ, ನವಗ್ರಹ ಪೂಜೆ, ಹೋಮ, ಹವನ ಹಾಗೂ ಮಂಗಳಾರತಿ ವಿಧಿವಿಧಾನಗಳೊಂದಿಗೆ ನೆರವೇರಿಸಲಾಯಿತು. ಈ ಧಾರ್ಮಿಕ ಕಾರ್ಯಕ್ರಮದಲ್ಲಿ ಮಸ್ಕಿ ಪಟ್ಟಣದ ವಿಶ್ವಕರ್ಮ ಸಮಾಜದವರು, ಶ್ರೀ ಕಾಳಿಕಾದೇವಿಯ ಭಕ್ತರು ಹಾಗೂ ನಾನಾ ಕಡೆಯಿಂದ ಆಗಮಿಸಿದ ವಿಶ್ವಕರ್ಮ ಸಮಾಜದ ಬಂಧುಗಳು ಭಕ್ತಿ ಸಮರ್ಪಿಸಿ ಕೃತಾರ್ಥರಾದರು. ಒಟ್ಟಾರೆ ಶಕ್ತಿ ಆರಾಧನೆಯ ಮೂಲಕ ಧಾರ್ಮಿಕ ಶ್ರದ್ಧೆ ಹಾಗೂ ಸಾಮಾಜಿಕ ಏಕತೆಯನ್ನು ಸಾರಿದ ಕಾಳಿಕಾದೇವಿಯ ವಾರ್ಷಿಕೋತ್ಸವ ಮಸ್ಕಿಯಲ್ಲಿ ಭಕ್ತರ ಮನದಲ್ಲಿ ಆಳವಾದ ಭಕ್ತಿ ಮೂಡಿಸಿತು.

## ಟಿಬಿಡ್ಯಾಂ ಕ್ರಸ್ಟ್ ಗೇಟ್ ಅಳವಡಿಕೆ ಕೊಟ್ಟ ಹಣ ಹಿಂಪಡೆದ ಸರ್ಕಾರಕ್ಕೆ ಮಾನ ಮರ್ಯಾದೆ ಇಲ್ಲ: ನಾಡಗೌಡ

❑ ನೈಜ್ಯ ದೆಸೆ ನ್ಯೂಸ್

**ತುಂಗಭದ್ರಾ ಜಲಾಶಯದ ಕ್ರಸ್ಟ್ ಗೇಟ್ ಗಳನ್ನು ಕೂಡಿಸಲು ರಾಜ್ಯ ಸರ್ಕಾರ ಹಣ ನೀಡಿ ವಾಪಸ್ಸು ಪಡೆದಿದ್ದು ಯಾಕೆ ? ಸರ್ಕಾರಕ್ಕೆ ಮಾನ ಮರ್ಯಾದೆ ಇದೆಯಾ? ಎಂದು ಮಾಜಿ ಸಚಿವರಾದ ವೆಂಕಟರಾವ್ ನಾಡಗೌಡ ಅವರು, ಸಾಮಾಜಿಕ ಜಾಲತಾಣದಲ್ಲಿ ಹೇಳಿಕೆಯನ್ನು ಬಿಡುಗಡೆ ಮಾಡುವ ಮೂಲಕ ರಾಜ್ಯ ಸರ್ಕಾರಕ್ಕೆ ಚಾಟಿ ಬೀಸಿದ್ದಾರೆ.**

ಸಾಮಾಜಿಕ ಜಾಲತಾಣದಲ್ಲಿ ಹೇಳಿಕೆ ಬಿಡುಗಡೆ ಮಾಡಿರುವ ನಾಡಗೌಡರು, ರಾಜ್ಯ ಸರ್ಕಾರ ರೈತರ ಜೊತೆಗೆ ಚೆಲ್ಲಾಟವಾಡುತ್ತಿದೆ. ಕೊಟ್ಟ ಹಣವನ್ನು ರಾಜ್ಯ ಸರ್ಕಾರ ಹಿಂಪಡೆಯಲು ಕಾರಣವಾದರೂ ಏನು? ಗುರುವಾರದಂದು ಆಂಧ್ರಪ್ರದೇಶದ ಪ್ರತಿನಿಧಿಯಾಗಿ



ಕನ್ನಯ್ಯನಾಯ್ಡು ಅವರು, ಟಿಬಿಡ್ಯಾಂ ಕ್ರಸ್ಟ್ ಗೇಟ್ ಗಳನ್ನು ಪರಿಶೀಲನೆಗೆ ಬಂದಾಗ ಕೆಲಗಾರರ ಸಂಖ್ಯೆ ಹೆಚ್ಚಿಸಲು ಗುತ್ತಿಗೆದಾರರನ್ನು ಕೇಳಿದಾಗ ಸರ್ಕಾರ ಹಣ ವಾಪಾಸು ಪಡೆದ ವಿಷಯ ಗೊತ್ತಾಗಿದ್ದು, ಈಗಾಗಲೇ ಮಾಧ್ಯಮದಲ್ಲಿ ಬಂದಿದೆ.

ಈ ಸರ್ಕಾರಕ್ಕೆ ಮಾನ ಮರ್ಯಾದೆ ಇಲ್ಲ. ಆಂಧ್ರ ಸರ್ಕಾರ ತನ್ನ ಪಾಲಿನ 35 ಕೋಟಿ ರೂ.ನೀಡಿ, ಈಗಾಗಲೇ ಎರಡ್ಮೂರು ತಿಂಗಳು ಕಳೆದಿದೆ. ನಮ್ಮ ಸರ್ಕಾರ ಕೊಟ್ಟ ಹಣ ಹಿಂಪಡೆದ ವಿಚಾರ ತಿಳಿದು ಬೇಸರವಾಗಿದೆ. ನಮ್ಮ ರೈತರು ಸರ್ಕಾರದ ಕಾಳಜಿ ಅರ್ಥ ಮಾಡಿಕೊಳ್ಳಬೇಕು. ರೈತರ ಜೊತೆಗೆ ಚೆಲ್ಲಾಟ ಆಡುತ್ತಿದೆ. ಈ ಕೂಡಲೇ ಸರ್ಕಾರ ಎಚ್ಚೆತ್ತುಕೊಂಡು ಸರಿಯಾದ ಸಮಯಕ್ಕೆ ಟಿಬಿಡ್ಯಾಂ ಕ್ರಸ್ಟ್ ಗೇಟ್ ಗಳನ್ನು ಕೂಡಿಸಿ ನೀರು ಕೊಡಬೇಕು. ಇಲ್ಲದಿದ್ದಲ್ಲಿ ರೈತರು ಸರ್ಕಾರಕ್ಕೆ ಸರಿಯಾದ ಪಾಠ ಕಲಿಸುತ್ತಾರೆ. ಗುತ್ತಿಗೆ ಆಧಾರದ ಮೇಲೆ ಕೆಲಸ ಮಾಡಿದವರಿಗೆ ಸಂಬಳ ನೀಡಿಲ್ಲ. ಅವರು ವಿಷ ಕುಡಿಯಲು ಮುಂದಾಗಿದ್ದಾರೆ. ಹೊರಟಿದ್ದಾರೆ. ಅವರ ಬದುಕಿನ ಜೊತೆ ಸರ್ಕಾರ ಚೆಲ್ಲಾಟವಾಡುತ್ತಿದೆ. ಸರ್ಕಾರ ದಿವಾಳಿ ಆಗಿದೆ ಎಂದು ಸರ್ಕಾರದ ನಡೆಯನ್ನು ತೀವ್ರವಾಗಿ ಖಂಡಿಸಿದರು.

## ಬ್ರಹ್ಮಲೀನರಾದ ಶ್ರೀಸಿದ್ದರಾಮನಂದಪುರಿ ಸ್ವಾಮಿಗಳ ಪುಣ್ಯಾರಾಧನೆಗೆ ಸಿಎಂಗೆ ಆಹ್ವಾನ ನೀಡಿದ ಕೆ.ವಿರೂಪಾಕ್ಷಪ್ಪ

❑ ನೈಜ್ಯ ದೆಸೆ ನ್ಯೂಸ್

**ಮಕರ ಸಂಕ್ರಾಂತಿ ದಿನವೆ ಬ್ರಹ್ಮಕ್ಯರಾದ ಪ.ಪೂ.ಶ್ರೀ ಸಿದ್ದರಾಮನಂದಪುರಿ ಮಹಾಸ್ವಾಮಿಗಳು ಕಾಗಿನೆಲೆ ಮಹಾಸಂಸ್ಥಾನ ಕನಕ ಗುರುಪೀಠ ತಿಂಥಣಿ ಬ್ರಿಡ್ಜ್ ನ ಪರಮ ಪೂಜ್ಯರ 16ನೇ ದಿನದ ಪುಣ್ಯಾರಾಧನೆಯ ಕಾರ್ಯಕ್ರಮಕ್ಕೆ ಕರ್ನಾಟಕ ಸರ್ಕಾರದ ಗೌರವಾನ್ವಿತ ಮುಖ್ಯಮಂತ್ರಿಗಳಾದ ಸಿದ್ದರಾಮಯ್ಯನವರನ್ನು ಸಚಿವರಾದ ಸತೀಶ್ ಜಾರಕಿಹೊಳಿ ಹಾಗೂ ಪಂಚಗ್ಯಾರಂಟಿ ಸಮಿತಿಯ ಅಧ್ಯಕ್ಷರಾದ ಹೆಚ್.ಎಂ.ರೇವಣ್ಣ ಅವರನ್ನು ಭೇಟಿಯಾಗಿ ಕಾರ್ಯಕ್ರಮದಲ್ಲಿ ಭಾಗವಹಿಸಲು ಮಾಜಿ ಸಂಸದರಾದ ಕೆ.ವಿರೂಪಾಕ್ಷಪ್ಪನವರು ಗಣ್ಯರನ್ನು ಆಹ್ವಾನಿಸಿದರು.**

ಈ ಸಂದರ್ಭದಲ್ಲಿ:



ಪರಮಪೂಜ್ಯರಾದ ಚಿದಾನಂದಯ್ಯ ಗುರುವಿನ್, ಮಾಜಿ ಸಭಾಪತಿಗಳಾದ ರಘುನಾಥರಾವ್ ಮಲ್ಕಾಪುರೆ, ಶಾಸಕರಾದ ದೊಡ್ಡನಗೌಡ ಹೆಚ್.ಪಾಟೀಲ್, ರಾಘವೇಂದ್ರ ಹಿಟ್ನಾಳ್, ರಾಜ್ಯ ಕುರುಬರ ಸಂಘದ ಅಧ್ಯಕ್ಷರಾದ ಎಂ.ಈರಣ್ಣ, ಸಮಾಜದ ಮುಖಂಡರಾದ ಭೀಮಣ್ಣ ಮೇಟಿ, ಗುರುನಾಥ ಪೂಜಾರಿ ಅಧ್ಯಕ್ಷರು ಕುರುಬ ಗೊಂಡ ಸಮಾಜ ಕಲ್ಬುರ್ಗಿ, ಸೇರಿದಂತೆ ಇತರರು ಉಪಸ್ಥಿತರಿದ್ದರು.

## ರಾಯಚೂರು ಜಿಲ್ಲೆಯನ್ನು ಆನೆಕಾಲು ರೋಗಮುಕ್ತ ಮಾಡಲು ರಾತ್ರಿ ವೇಳೆಯ ರಕ್ತಲೇಪನ ಕಾರ್ಯಕ್ಕೆ ತಪ್ಪದೆ ಕೈಜೊಡಿಸಿ: ಡಾ. ಸುರೇಂದ್ರಬಾಬು

❑ ನೈಜ್ಯ ದೆಸೆ ನ್ಯೂಸ್

**ರಾಯಚೂರು: ಜಿಲ್ಲೆಯಲ್ಲಿ ಆನೆಕಾಲು ರೋಗದ ಹೊಸ ಪ್ರಕರಣಗಳ ಸಂಪೂರ್ಣ ನಿಯಂತ್ರಣಕ್ಕಾಗಿ ರೋಗ ಪತ್ತೆ ಹಚ್ಚಲು, ಆಯ್ದ ಗ್ರಾಮಗಳು, ವಲಸೆ ಪ್ರದೇಶಗಳಲ್ಲಿ ರೋಗ ಪತ್ತೆಗಾಗಿ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆಯ ವೈದ್ಯಕೀಯ ತಂಡ ರಾತ್ರಿ ವೇಳೆ ಕೈಗೊಳ್ಳುವ ರಕ್ತ ಲೇಪನ ಕಾರ್ಯಕ್ಕೆ ಸಹಕರಿಸಿ ಆನೆಕಾಲು ಮುಕ್ತ ರಾಯಚೂರು ಜಿಲ್ಲೆಯಾಗಿಸಲು ಸಾರ್ವಜನಿಕರಲ್ಲಿ ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣಾಧಿಕಾರಿ ಡಾ ಸುರೇಂದ್ರಬಾಬು ವಿನಂತಿಸಿದರು.**

ದೇವದುರ್ಗ ತಾಲೂಕಿನ ಗಬ್ಬೂರು ಪ್ರಾಥಮಿಕ ಅರೋಗ್ಯ ಕೇಂದ್ರ ವ್ಯಾಪ್ತಿಯ ಖಾನಾಪೂರು ಗ್ರಾಮದಲ್ಲಿ ರಾತ್ರಿ ವೇಳೆ ಹಮ್ಮಿಕೊಂಡ ರಕ್ತಲೇಪನ ಕಾರ್ಯವನ್ನು ಖುದ್ದು ಪರಿಶೀಲಿಸಿ ಜನತೆಯೊಂದಿಗೆ ಮಾತನಾಡಿ ಸಮುದಾಯದಲ್ಲಿ ನಮ್ಮೊಂದಿಗೆ ಹಲವು ವಿಧದ ಸೊಳ್ಳೆಗಳು ಇದ್ದು ಅದರಲ್ಲಿ ಕ್ಯೂಲೆಕ್ಸ್ ಸೊಳ್ಳೆಯು,



ಆನೆಕಾಲು ರೋಗ ಹೊಂದಿದ ವ್ಯಕ್ತಿಗೆ ಕಚ್ಚಿ ಅದೆ ಸೊಳ್ಳೆ ಇನ್ನೊಬ್ಬರಿಗೆ ಕಚ್ಚಿದಾಗ ಬರಿಗಣ್ಣಿಗೆ ಕಾಣದ 'ವುಚೆರೇರಿಯಾ ಬ್ಯಾಂಕ್ರೋಫ್ಟಿ' 'ಬ್ರೂಗಿಯಾ ಮಲಾಯಿ' ಎಂಬ ಪರಾವಲಂಬಿ ನೂಲಿನಂತಹ ಹುಳುಗಳನ್ನು ಅವರ ದೇಹಕ್ಕೆ ವರ್ಗಾಯಿಸುತ್ತವೆ. ಈ ಹುಳುಗಳು ರಕ್ತ ಮತ್ತು ದುಗ್ಧರಸನಾಳಗಳಲ್ಲಿ ಬೆಳೆದು, ದ್ರವ ಹರಿಯದಂತೆ ತಡೆಯುತ್ತವೆ, ಇದರಿಂದ ಕೈ ಕಾಲುಗಳು ಆನೆಯ ಕಾಲಿನಂತೆ ದಪ್ಪವಾಗುವ ಮೂಲಕ ಶಾಶ್ವತವಾಗಿ ಆನೆಕಾಲು ರೋಗಕ್ಕೆ ಕಾರಣವಾಗುತ್ತಿದ್ದು, ಜೊತೆಗೆ ಒಮ್ಮೆ ಬಂದರೆ ಜೀವನ ಪರ್ಯಂತ ಕಾಡುವ ಆನೆಕಾಲು ರೋಗಿಯಾಗುವುದನ್ನು ಗುರ್ತಿಸಿ ಆರಂಭದಲ್ಲಿಯೇ ತಡೆಗಟ್ಟಲು ರಾತ್ರಿ ವೇಳೆ ಆರೋಗ್ಯ ಇಲಾಖೆಯ ಜಿಲ್ಲೆಯಲ್ಲಿ ಈಗಾಗಲೆ ಎಲ್ಲ ತಾಲುಕುಗಳ ಆಯ್ದ ಗ್ರಾಮಗಳಲ್ಲಿ, ನಗರದ ವಾರ್ಡ್ಗಳಲ್ಲಿ ರಾತ್ರಿ ವೇಳೆ ರಕ್ತ ಲೇಪನ ಕಾರ್ಯ ಕೈಗೊಳ್ಳಲಾಗುತ್ತಿದ್ದು ಜನತೆಯು ಸಹಕರಿಸಿ ಎಂದು ವಿನಂತಿಸಿದರು.

ಜಿಲ್ಲಾ ಸರ್ವೆಕ್ಷಣಾಧಿಕಾರಿ ಡಾ ಗಣೇಶ ಕೆ ಮಾತನಾಡಿ, ಸಾಮಾನ್ಯವಾಗಿ ಆನೆಕಾಲು ರೋಗ ವ್ಯಕ್ತಿಯಲ್ಲಿ ಕಂಡುಬರಲು ಧಿರ್ಘಾವಧಿ ತೆಗೆದುಕೊಳ್ಳುತ್ತದೆ. ಆರಂಭದಲ್ಲಿ ಜ್ವರ ಮತ್ತು ಚಳಿ, ಚರ್ಮದ ಮೇಲೆ ಸೋಂಕು ಹಾಗೂ ಕಾಲುಗಳು, ತೋಳುಗಳು, ಸ್ತನಗಳು ಅಥವಾ ಜನನಾಂಗದ ಭಾಗಗಳಲ್ಲಿ ಊತ ಕಂಡುಬರುತ್ತದೆ. ಕ್ರಮೇಣ ಚರ್ಮವು ದಪ್ಪವಾಗಿ, ಗಟ್ಟಿಯಾಗಿ, ಗರುಸಾಗಿ ಆನೆ ಚರ್ಮದಂತೆ ಕಾಣಿಸುವುದು. ಇದರಿಂದ ಅತಿಯಾದ ನೋವು ಮತ್ತು ನಡೆಯಲು ಕಷ್ಟವಾಗುವುದು. ಇದನ್ನು ರೋಗ ಲಕ್ಷಣಗಳನುಸಾರ ನಿರ್ವಹಣೆ ಚಿಕಿತ್ಸೆ ಮಾತ್ರ ಸಾಧ್ಯವಿದ್ದು, ಸಂಪೂರ್ಣ ಗುಣಪಡಿಸಲು ಕಷ್ಟಕರ.

ಈ ಹಿನ್ನಲೆ ಮನೆಯ ಸುತ್ತಲು ಚರಂಡಿ, ತಿಪ್ಪೆಗಳ ಹತ್ತಿರ ಅನುಪಯುಕ್ತ ನೀರು ನಿಲ್ಲದಂತೆ ಹಾಗೂ ಮನೆ ಹೊಲ, ಗದ್ದೆಗಳಲ್ಲಿ ಕೆಲಸ ಮಾಡುವಾಗ ಸೊಳ್ಳೆಯಿಂದ ಕಚ್ಚಿಸಿಕೊಳ್ಳದಂತೆ ಜಾಗೃತಿ ವಹಿಸಲು ವಿನಂತಿಸಿದರು. ಈ ಸಂದರ್ಭದಲ್ಲಿ 105 ಜನರ ಮೇಲೆ ರಕ್ತ ಲೇಪನವನ್ನು ಪ್ರಾಥಮಿಕ ಆರೋಗ್ಯ ಕೇಂದ್ರದ ಆಡಳಿತ ವೈದ್ಯಾಧಿಕಾರಿ ಡಾ ಸಿದ್ರಾಮೇಶ, ಹಿರಿಯ ಆರೋಗ್ಯ ನಿರೀಕ್ಷಣಾಧಿಕಾರಿ ಹನುಮಂತರಾಯ ಹೂಗಾರ್, ಪ್ರಾಥಮಿಕ ಆರೋಗ್ಯ ಸುರಕ್ಷಣಾಧಿಕಾರಿ ಈರಾಕ್ಷಣಿ, ಸಿಹೆಚ್ಓ ಹರೀಶ್, ಆಶಾ ಕಾರ್ಯಕರ್ತೆ ಸಾಬಮ್ಮ ಸೇರಿದಂತೆ ಅಂಗನವಾಡಿ ಕಾರ್ಯಕರ್ತೆಯರ ತಂಡದ ಮೂಲಕ ಕೈಗೊಂಡರು. ಸಾರ್ವಜನಿಕರು ಆಗಮಿಸಿ ಪರೀಕ್ಷೆಗೆ ಸಹಕರಿಸಿದರು.

## ಸಾಹಿತ್ಯ ಸಿಂಚನ

ತಿಮ್ಮ ಹಿಡಿದು ನಾಯಿ ಬಾಲ
ಅಮ್ಮನಿಗೆ ತೋರಿದ
ಸುಮ್ಮನಿರದೆ ಮತ್ತೆ ಕಾಲು
ಎಮ್ಮೆಯಡೆಗೆ ಊರಿದ

ತಿಮ್ಮ ಎಳೆದ ಜೋರಾಗಿ
ಬಿಡದೆ ನಾಯಿ ಬಾಲವ
ಪ್ರೇಮದಿಂದ ಶುನಕ ನೋಡೆ
ತಿಮ್ಮನೆಳೆದ ಬಾಲವ

ಅಮ್ಮ ನೋಡೆ ನಾಯಿ ಬಾಲ
ನಾನು ಸೀದ ಮಾಡಿದೆ
ತಮ್ಮ ಮತ್ತೆ ಬಾಗದಂತೆ
ಬಾಲ ನೇರ ಮಾಡಿದೆ

ತಿಮ್ಮ ಸಾಕು ನಾಯಿ ಬಾಲ
ಎಂದೂ ನೆಟ್ಟಗಾಗದು
ಶ್ರಮವು ಏಕೆ ಕೆಂದ ಎತ್ತು
ಎಂದೂ ಬೆಳ್ಳಗಾಗದು

ಸೊಟ್ಟಗಿರುವ ನಾಯಿ ಬಾಲ
ತಾನು ನೆಟ್ಟಗಾಗದು
ಬಿಟ್ಟ ತಿಮ್ಮ ತೆನೆಯ ಹೊತ್ತ
ಬಾಳೆ ಹಾಗೆ ಬಾಲವು

ಬಾಲದಂತೆ ಜಾಣ ಕೇಳು
ಹಲವರ ಹುಟ್ಟು ಗುಣವು
ಸುಟ್ಟರೂನು ಹೋಗದಂತೆ
ನೆಲದಿ ಬಿದ್ದ ಬಾಣವು

ತಿಮ್ಮ ಹರ್ಷದಿಂದ ನುಡಿದ
ತಾಯಿ ಮಾತು ಕೇಳುತ
ನೀರಿಗೇಕೆ ಎಮ್ಮೆ ಬಿಡ
ಬಾರದೆಂದು ಹೇಳುತ

**ತುಳಸಿದಾಸ ಬಿ ಎಸ್**

# ಚವನಭಾವಿಯಲ್ಲಿ ವಿಕಸಿತ ಗ್ಯಾರಂಟಿ ರೋಜಗಾರ, ಅಜೀವಿಕಾ ಮಿಷನ್ ವಿಶೇಷ ವಾರ್ಡ ಸಭೆ

**ನೈಜ್ಯ ದೆಸೆ ನ್ಯೂಸ್**

**ಮುದ್ದೇಬಿಹಾಳ: ತಾಲ್ಲೂಕಿನ ಚವನಭಾವಿ ಗ್ರಾಮದಲ್ಲಿ 2026?27ನೇ ಸಾಲಿನ ವಿಕಸಿತ ಗ್ಯಾರಂಟಿ ರೋಜಗಾರ ಹಾಗೂ ಅಜೀವಿಕಾ ಮಿಷನ್ (ಗ್ರಾಮೀಣ) ಯೋಜನೆಯಡಿ ಕೈಗೊಳ್ಳಲಿರುವ ವಿವಿಧ ಕಾಮಗಾರಿಗಳ ಪಟ್ಟಿ ತಯಾರಿಸುವ ಉದ್ದೇಶದಿಂದ ಶುಕ್ರವಾರ ಶ್ರೀ ಮಾರುತೇಶ್ವರ ದೇವಸ್ಥಾನ ಆವರಣದಲ್ಲಿ ವಿಶೇಷ ವಾರ್ಡ ಸಭೆ ನಡೆಸಲಾಯಿತು.**




ಸಭೆಯನ್ನು ಉದ್ದೇಶಿಸಿ ಮಾತನಾಡಿದ ಅಡವಿ ಸೋಮನಾಳ ಗ್ರಾಮ ಪಂಚಾಯತಿ ಅಭಿವೃದ್ಧಿ ಅಧಿಕಾರಿ ನಿರ್ಮಲಾ ತೋಟದ, ರೈತರು ಹಾಗೂ ಕೂಲಿ ಕಾರ್ಮಿಕ–ರಿಗೆ ರಾಷ್ಟ್ರೀಯ ಉದ್ಯೋಗ ಖಾತ್ರಿ ಯೋಜನೆ (ಜಿಎನ್‌ಆರ್‌ಇಜಿ) ಅಡಿಯಲ್ಲಿ ಕೃಷಿ ಹೊಂಡ ನಿರ್ಮಾಣ, ಬದು ನಿರ್ಮಾಣ, ಚೆಕ್ ಡ್ಯಾಮ್, ಧನದ ಕೊಟ್ಟಿಗೆ ಸೇರಿದಂತೆ ವಿವಿಧ ಅಭಿವೃದ್ಧಿ ಕಾಮಗಾರಿಗಳಿಗೆ ಅರ್ಜಿ ಸಲ್ಲಿಸಲು ಅವಕಾಶವಿದೆ ಎಂದು ತಿಳಿಸಿದರು. ಸಾರ್ವಜನಿಕರು ಈ ಯೋಜನೆಗಳ ಸದುಪಯೋಗ ಪಡೆದುಕೊಳ್ಳುವಂತೆ ಮನವಿ ಮಾಡಿದರು. ಚವನಭಾವಿ ಗ್ರಾಮದಲ್ಲಿ ಹಳೆಯ ಹಾಗೂ ಬಿದ್ದ ಮನೆಗಳಿಗೆ ವಿಧಿಸಲಾಗಿರುವ ಮನೆ ತೆರಿಗೆ ಕಡಿತಗೊಳಿಸುವ ಕುರಿತು ಅರ್ಜಿ ಸಲ್ಲಿಸಿದಲ್ಲಿ, ಮೇಲಾಧಿಕಾರಿಗಳ ಗಮನಕ್ಕೆ ತರಲಾಗುವುದು. ಮೇಲಾಧಿಕಾರಿಗಳಿಂದ ಅನುಮೋದನೆ ದೊರೆತ ತಕ್ಷಣವೇ ಮನೆ ತೆ–ರಿಗೆ ಕಡಿತ ಸೌಲಭ್ಯವನ್ನು ಅರ್ಜಿದಾರ–ರಿಗೆ ನೀಡಲಾಗುವುದು ಎಂದು ಹೇಳಿದರು. ಗ್ರಾಮ ಪಂಚಾಯತಿ ಅಭಿವೃದ್ಧಿಗೆ ಸಾರ್ವಜನಿಕರು ಸಮಯಕ್ಕೆ ಸರಿಯಾಗಿ ತೆರಿಗೆ ಪಾವತಿಸುವುದು ಅತ್ಯಂತ ಅವಶ್ಯಕವಾಗಿದ್ದು, ಇದರಿಂದ ಗ್ರಾಮಕ್ಕೆ ಅಗತ್ಯವಾದ ಮೂಲಭೂತ ಸೌಕರ್ಯಗಳನ್ನು ಒದಗಿಸಲು ಅನುಕೂಲವಾಗುತ್ತದೆ ಎಂದು ಅವರು ತಿಳಿಸಿದರು.

ಈ ಸಂದರ್ಭದಲ್ಲಿ ಗ್ರಾಮ ಪಂಚಾಯತಿ ಅಧ್ಯಕ್ಷೆ ಸಂಗಮ್ಮ ಹಂಚಿನಾಳ, ಸದಸ್ಯ ಆಂಜನೇಯ ಪವಾರ, ಕಾರ್ಯದರ್ಶಿ ಬಸನಗೌಡ ಬಿರಾದಾರ, ಸಿಬ್ಬಂದಿಗಳಾದ ಬಲವಂತ ಜೋಗಿನ, ಬಸಣ್ಣ ಬಿರಾದಾರ, ಗುರುರಾಜ ಗುಡಗುಂಟಿ, ಅಂಗನವಾಡಿ ಕಾರ್ಯಕರ್ತೆಯರಾದ ಇಂದಿರಾ ಕುಂಬಾರ, ಶಾಂತಾ ಈಳಗೇರ, ಸಾವಿತ್ರಿ ನಾಲತವಾಡ, ಬಸಮ್ಮ ಸೋಮನಾಳ ಸೇ–ರಿದಂತೆ ಗ್ರಾಮ ಪಂಚಾಯತಿ ಸದಸ್ಯರು ಹಾಗೂ ಗ್ರಾಮಸ್ಥರು ಉಪಸ್ಥಿತರಿದ್ದರು.

# ನೇತಾಜಿಯವರ ತ್ಯಾಗ ಸರ್ವರಿಗೂ ಪ್ರೇರಣೆಯಾಗಿದೆ NS ಪಾಟೀಲ್



**ನೈಜ್ಯ ದೆಸೆ ನ್ಯೂಸ್**

**ಮಾನ್ವಿ: ಭಾರತವನ್ನು ಬ್ರಿಟಿಷರಿಂದ ಮುಕ್ತಿಗೊಳಿಸಲು ಸ್ವತಂತ್ರ ಸೇನೆ ಕಟ್ಟಿದ ರಾಷ್ಟ್ರ ಕಂಡ ಅಪ್ರತಿಮ ಸ್ವಾತಂತ್ರ್ಯ ಹೋರಾಟಗಾರ ಧೀರ ಸೇನಾನಿ ಭಾರತೀಯರನ್ನು ಬಡಿದಿಬ್ಬಿಸಿದ ನನಗೆ ರಕ್ತ ಕೊಡಿ ನಾನು ನಿಮಗೆ ಸ್ವಾತಂತ್ರ್ಯ ಕೊಡುತ್ತೇನೆ ಎನ್ನುವ ಮೂಲಕ ಕ್ರಾಂತಿಯ ಕಿಚ್ಚು ಹಚ್ಚಿದ ಯುವಜನತೆಯನ್ನು ಬಡಿದೆಬ್ಬಿಸಿದ**

ಸ್ವಾತಂತ್ರ್ಯಕ್ಕಾಗಿ ತೋರಿದ ಪರಾಕ್ರಮ ತ್ಯಾಗ ಅಮರ ಅಂತಹ ಧೀರ ಸೇನಾ ನಿಯ ಜಯಂತಿಯನ್ನು ನಾವು ನಮ್ಮ ಗ್ರಾಮದಲ್ಲಿ ಬಹಳ ಸರಳ ರೀತಿಯಲ್ಲಿ ನನ್ನ ನೆಚ್ಚಿನ ಗ್ರಾಮದ ಯುವಕರ ಜೊತೆ ಆಚರಿಸುತ್ತಿರುವುದು ಬಹಳ ಹೆಮ್ಮೆಯ ವಿಷಯ ನೇತಾಜಿಯವರ ತ್ಯಾಗ ಸರ್ವರಿಗೂ ಪ್ರೇರಣೆಯಾಗಿದೆ ಎಂದು ಗ್ರಾಮದ ಹಿರಿಯ ಮುಖಂಡರಾದ ನಾಗನಗೌಡ ಪೋಲೀಸ್ ಪಾಟೀಲ್ ತಮ್ಮ ಅನಿಸಿಕೆಯನ್ನು ವಿದ್ಯಾರ್ಥಿಗಳ ಜೊತೆ ಹಂಚಿಕೊಂಡರು. ನೀರಮಾನ್ವಿ ಗ್ರಾಮ ಪಂಚಾಯಿತಿ ಗ್ರಂಥಾಲಯದಲ್ಲಿ ಇಂದು ಗ್ರಾಮದ ದೇಶಭಕ್ತರ ಜೊತೆ ಹಾಗೂ ಪಿ ಎಂ ಶ್ರೀ ಸರಕಾರಿ ಶಾಲೆಯ ಮಕ್ಕಳ ಜೊತೆ ನೇತಾಜಿ ಸುಭಾಷ್ ಚಂದ್ರ ಬೋಸ್ ರವರ ಜನ್ಮದಿನಾಚರಣೆಯನ್ನು ಆಚ–'ರಿಸಲಾಯಿತು ಈ ಸಂದರ್ಭದಲ್ಲಿ ಪಿ ಎಂ ಶ್ರೀ ಶಾಲೆಯ ವಿದ್ಯಾರ್ಥಿಗಳು ಸಂಗೀತ ಶಿಕ್ಷಕರು ಗ್ರಾಮದ ಗಂಟೆಯ್ಯದೊರೆ ರಂಗನಾಥ ದೊರೆ ಪಡಯ್ಯ ಸ್ವಾಮಿ ಯಲ್ಲಯ್ಯ ದೊರೆ ಜೆ ವೀರೇಶ ಗ್ರಂಥಪಾಲಕ ರಂಗನಾಥ ಗೌಡ ಉಪಸ್ಥಿತಿ ಇದ್ದು ಕಾರ್ಯಕ್ರಮ ಯಶಸ್ವಿಗೊಳಿಸಿದರು.

## ಹಿರೂರ ಗ್ರಾಮದಲ್ಲಿ ಚೌಡಯ್ಯನವರ ಜಯಂತಿ ಆಚರಣೆ



**ನೈಜ್ಯ ದೆಸೆ ನ್ಯೂಸ್**

ತಾಳಿಕೋಟೆ: ತಾಲ್ಲೂಕಿನ ಚೋಕಾವಿ ಗ್ರಾಮದಲ್ಲಿ ನಿಜಶರಣ ಅಂಬಿಗರ ಚೌಡಯ್ಯ ವೃತ್ತದಲ್ಲಿ ಅಂಬಿಗರ ಸಮಾಜದ ಬಂಧುಗಳು, ಗ್ರಾಮದ ಊರಿನ ಹಿರಿಯರು ಹಾಗೂ ಮಿತ್ರರು ನಿಜ ಶರಣ ಅಂಬಿಗರ ಚೌಡಯ್ಯ ನವರ 906 ನೇ ಜಯಂತಿಯನ್ನು ಭಕ್ತಿ ಭಾವದೊಂದಿಗೆ ಬುಧವಾರ ಆಚರಿಸಿದರು.

# ಮಾರ್ಕಂಡೇಯನ ಭಕ್ತಿ ನಮಗೆ ಆದರ್ಶ :ಡಾ. ಲಕ್ಷ್ಮೀದೇವಿ




**ನೈಜ್ಯ ದೆಸೆ ನ್ಯೂಸ್**

**ಮಸ್ಕಿ: ಋಷಿ ದಂಪತಿಗಳಿಗೆ ಜನಿಸಿ ಅಲ್ಪಾಯುಷ್ಯ ಪಡೆದ ಮಾರ್ಕಂಡೇಯ ಜನಿಸಿದನು. ಆದರೆ ಇನ್ನೂ ಮಗುವಾಗಿದ್ದ ಮಾರ್ಕಂಡೇಯ್ಯ ಕಾಡಿಗೆ ಹೋಗಿ ಶಿವನನ್ನು ಭಕ್ತಿಯಿಂದ ಪೂಜಿಸಿ ಯಮಪಾಶದಿಂದ ತಪ್ಪಿಸಿಕೊಂಡು ಚಿರಂಜೀವಿಯಾಗಿ ಉಳಿದ ಎಂದು ಸಿಂಧನೂರು ಪದವಿ ಕಾಲೇಜಿನ ಸಾಹಾಯಕ ಪ್ರಾಧ್ಯಾಪಕರಾದ ಡಾ. ಲಕ್ಷ್ಮೀದೇವಿ ಹೇಳಿದರು.**

ಪಟ್ಟಣದ ಮಾರ್ಕಂಡೇಶ್ವರ ದೇವಸ್ಥಾನದಲ್ಲಿ ಹಮ್ಮಿಕೊಂಡಿದ್ದ ಶ್ರೀ ಮಾರ್ಕಂಡೇಶ್ವರ ಜಯಂತಿ ಕಾರ್ಯಕ್ರಮದ ವಿಶೇಷ ಉಪನ್ಯಾಸಕಿಯಾಗಿ ಮಾತನಾಡಿದ ಅವರು ಮಾರ್ಕಂಡೇಯ್ಯನು ಒಬ್ಬ ಮಾಹಾನ್ ಋಷಿಯಾಗಿದ್ದು ಪರಮಾತ್ಮನ ಕೃಪೆಯಿಂದ ಅಮರನಾಗಿ ಉಳಿಯಬುಹುದು ಎಂದು ಕಲಿಸಿದನು ಬಾಲ್ಯದಲ್ಲಿ ಮಕ್ಕಳ ಮನಸಿನಲ್ಲಿ ಭಕ್ತಿ ಗುಣಗಳನ್ನು ತುಂಬುವುದರಿಂದ ಉತ್ತಮ ಫಲಿತಾಂಶಗಳನ್ನು ಪಡೆಯಬಹುದು ಎಂಬುದಕ್ಕೆ ಮಾರ್ಕಂಡೇಯ ಸಾಕ್ಷಿ ಎಂದರು.

ಅದೇ ರೀತಿ ಕಾರ್ಯಕ್ರಮವನ್ನು ಉದ್ಘಾಟಿಸಿ ಮಾತನಾಡಿದ ಪುರಸಭೆ ನೂತನ ಅಧ್ಯಕ್ಷ ಸುರೇಶ ಹರಸೂರ ಯಾವುದೇ ಸಮಾಜ ಏಳಿಗೆಯಾಗಬೇಕಾದರೆ ಶಿಕ್ಷಣ ಮುಖ್ಯ ಈ ನಿಟ್ಟಿನಲ್ಲಿ ಸಮಾಜದ ಪ್ರತಿಯೊಬ್ಬರು ತಮ್ಮ ಮಕ್ಕಳಿಗೆ ಉತ್ತಮ ಶಿಕ್ಷಣ ನೀಡುವದು ತಮ್ಮೆಲ್ಲರ ಕರ್ತವ್ಯ ಎಂದು ಹೇಳಿದರು. ಅದೇರೀತಿ ಸಮಾಜದ ಅಧ್ಯಕ್ಷ ಲಕ್ಷ್ಮಣ ಕರ್ಲಿ, ಬಸವರಾಜ ಬುಕ್ಕಣ್ಣ, ಡಾ. ಶಂಕರ ಕರ್ಲಿ, ಮಲ್ಲಯ್ಯ ಪಗಡೇಕಲ್, ಪರಶುರಾಮ ಕೊಡುಗುಂಟಿ, ವೆಂಕಟೇಶ್ ಪಗಡೆಕಲ್, ಮಲ್ಲಿಕಾರ್ಜುನ ಶ್ಯಾಸಲ್, ಪರಶುರಾಮ್ ದೇವರೆಡ್ಡಿ,ಚಿನ್ನಪ್ಪ ಕರ್ಲಿ,ಮೀನಾಕ್ಷಿ ದೇವರೆಡ್ಡಿ, ನೇಕಾರ ಒಕ್ಕೂಟದ ಪದಾಧಿಕಾರಿಗಳು ಹಾಗೂ ಪದ್ಮಶಾಲಿ ಸಮಾಜ ಭಾಂದವರು ಇದ್ದರು.

## ಯುವ ಸಬಲೀಕರಣ ಮತ್ತು ಕ್ರೀಡಾ ಇಲಾಖೆಯಿಂದ ಜಿಮ್ ಫಿಟ್ನೆಸ್ ತರಬೇತಿಗಾಗಿ ಅರ್ಜಿ ಆಹ್ವಾನ

**ನೈಜ್ಯ ದೆಸೆ ನ್ಯೂಸ್**

**ರಾಯಚೂರು: 2025–26ನೇ ಸಾಲಿನಲ್ಲಿ ಪರಿಶಿಷ್ಟ ಜಾತಿ ಉಪ ಯೋಜನೆಯಡಿಯಲ್ಲಿ ಪರಿಶಿಷ್ಟ ಜಾತಿಯ ಯುವಜನರನ್ನು ಸ್ವಾವಲಂಬಿಯಾಗಲು ಉತ್ತೇಜಿಸುವ ದೃಷ್ಟಿಯಿಂದ ಫೆಬ್ರವರಿ 01, 2026 ರಿಂದ ಮಾರ್ಚ 17, 2026ರವರೆಗೆ ಬೆಂಗಳೂ–ರಿನ ಶ್ರೀ ಕಂಠಿರವ ಕ್ರೀಡಾಂಗಣದಲ್ಲಿ ಜಿಮ್ ಫಿಟ್ನೆಸ್ ತರಬೇತಿ ಶಿಬಿರವನ್ನು ಆಯೋಜಿಸಿದ್ದು, 18 ರಿಂದ 35 ವರ್ಷ ವಯೋಮಿತಿಯ ಆಸಕ್ತ ಯುವಕರಿಂದ ಅರ್ಜಿ ಆಹ್ವಾನಿಸಲಾಗಿದೆ.**

ಆಸಕ್ತ ಯುವಕರು ಜನವರಿ 28 ರೊಳಗಾಗಿ ಅರ್ಜಿಯನ್ನು ಯುವ ಸಬಲೀಕರಣ ಮತ್ತು ಕ್ರೀಡಾ ಇಲಾಖೆಯ ಸಹಾಯಕ ನಿರ್ದೇಶಕರ ಕಚೇರಿಗೆ ಸಲ್ಲಿಸಬೇಕು. ತಡವಾಗಿ ಬಂದ ಪ್ರಸ್ತಾವನೆಗಳನ್ನು ಪರಿಗಣಿಸಲಾಗುವುದಿಲ್ಲ ಎಂದು ಯುವ ಸಬಲೀಕರಣ ಮತ್ತು ಕ್ರೀಡಾ ಇಲಾಖೆಯ ಸಹಾಯಕ ನಿರ್ದೇಶಕರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ತಾಲೂಕು ಪಂಚಾಯತ್ ಕಚೇರಿಯಲ್ಲಿ ರಾಷ್ಟ್ರೀಯ ಮತದಾರರ ದಿನಾಚರಣೆ

**ನೈಜ್ಯ ದೆಸೆ ನ್ಯೂಸ್**

**ಸಿಂಧನೂರು: ತಾಲೂಕು ಪಂಚಾಯತ್ ಕಚೇ–ರಿಯಲ್ಲಿ ರಾಷ್ಟ್ರೀಯ ಮತದಾರರ ದಿನಾಚರಣೆಯನ್ನು ಸರಳವಾಗಿ ಆಚರಿಸಲಾಯಿತು. ಕಾರ್ಯಕ್ರಮದ ಮುಖ್ಯ ಉದ್ದೇಶ ಮತದಾನದ ಮಹತ್ವವನ್ನು ಸಾರ್ವಜನಿಕರಿಗೆ ತಿಳಿಸಿ, ಪ್ರಜಾಪ್ರಭುತ್ವ ವ್ಯವಸ್ಥೆಯನ್ನು ಇನ್ನಷ್ಟು ಬಲಪಡಿಸುವುದು ಕಾರ್ಯಕ್ರಮದಲ್ಲಿ ಮಾನ್ಯ ತಹಶೀಲ್ದಾರ್ ಶ್ರೀ ಅರುಣಕುಮಾರ್ ದೇಸಾಯಿ ಅವರು ಮಾತನಾಡಿ, ಮತದಾನದ ಕುರಿತು ಜಾಗೃತಿ ಮೂಡಿಸಿದರು.**




ಮತದಾರರ ದಿನಾಚರಣೆಯನ್ನು ಯಾಕೆ ಆಚರಿಸಲಾಗುತ್ತದೆ ಎಂಬುದನ್ನು ವಿವರಿಸಿ, ಪ್ರತಿಯೊಬ್ಬ ಅರ್ಹ ನಾಗರಿಕನು ತನ್ನ ಮತದಾನ ಹಕ್ಕನ್ನು ಕಡ್ಡಾಯವಾಗಿ ಬಳಸಬೇಕು ಎಂದು ತಿಳಿಸಿದರು. ಮತದಾನವು ಪ್ರಜಾಪ್ರಭುತ್ವದ ಅಡಿಪಾಯವಾಗಿದ್ದು, ಉತ್ತಮ ಆಡಳಿತ ನಿರ್ಮಾಣ–ಕ್ಕೆ ಸಹಕಾರಿಯಾಗುತ್ತದೆ ಎಂದು ಹೇಳಿದರು. ಅದೇ ಸಂದರ್ಭದಲ್ಲಿ ಮಾನ್ಯ ನ್ಯಾಯಾಧೀಶರಾದ ಶ್ರೀಮತಿ ರೂಪಾ ವಗ್ಗ ಅವರು ಮಾತನಾಡಿ, ಮತದಾನದ ಮಹತ್ವದ ಕುರಿತು ಅರಿವು ಮೂಡಿಸಿದರು. ಪ್ರತಿಯೊಬ್ಬ ನಾಗರಿಕನು ಜವಾಬ್ದಾರಿಯುತವಾಗಿ ಮತ ಚಲಾಯಿಸುವ ಮೂಲಕ ದೇಶದ ಭವಿಷ್ಯವನ್ನು ರೂಪಿಸಬಹುದು ಎಂದು ತಿಳಿಸಿದರು.

ಕಾರ್ಯಕ್ರಮದಲ್ಲಿ ಭಾಗವಹಿಸಿದ ನೂತನ ಮತದಾರರಿಗೆ ಮತದಾನ ಗುರುತಿನ ಚೀಟಿ ವಿತರಿಸಲಾಯಿತು ಕಾರ್ಯಕ್ರಮದಲ್ಲಿ ತಾಲೂಕು ನ್ಯಾಯವಾದಿಗಳ ಸಂಘದ ಅಧ್ಯಕ್ಷರು, ಪೌರಾಯುಕ್ತರು, ತಾಲೂಕು ಪಂಚಾಯತ್ ಅಧಿಕಾರಿಗಳು, ಸಿಬ್ಬಂದಿ ಹಾಗೂ ಇತರ ಗಣ್ಯರು ಉಪಸ್ಥಿತರಿದ್ದರು. ಕಾರ್ಯಕ್ರಮವು ಯಶಸ್ವಿಯಾಗಿ ಜರಗಿತು.

# ಕಾರುಣ್ಯಾಶ್ರಮದಲ್ಲಿ ಲಿಂಗೈಕ್ಯ ಶ್ರೀ ಸಿದ್ದರಾಮಾನಂದಪುರಿ ಮಹಾಸ್ವಾಮಿಗಳ ನುಡಿ ನಮನ ಕಾರ್ಯಕ್ರಮ

**ನೈಜ್ಯ ದೆಸೆ ನ್ಯೂಸ್**

**ಸಿಂಧನೂರು: ನಗರದ ಕಾರುಣ್ಯ ವೃದ್ಧಾಶ್ರಮದಲ್ಲಿ ಕಾಗಿನೆಲೆ ಮಹಾ ಸಂಸ್ಥಾನದ ತಿಂಥಿ–ಣಿ ಬ್ರೀಜ್ ಶಾಖಾ ಮಠದ ಪೀಠಾಧಿಪತಿಗಳಾಗಿದ್ದ ಸಿದ್ದರಾಮಾನಂದಪುರಿ ಮಹಾಸ್ವಾಮಿಗಳು ಶಿಕ್ಷಣ ಅನ್ನ ಜ್ಞಾನ ದಾಸೋಹ ಮೂರ್ತಿಗಳಾಗಿದ್ದರು. ಅವರು ತಮ್ಮನ್ನು ತಾವು ಸಮಾಜಕ್ಕೆ ಅರ್ಪಿಸಿಕೊಂಡಿದ್ದರು. ಅವರನ್ನು ಕಳೆದುಕೊಂಡ ನಾವು ನೀವೆಲ್ಲರೂ ಅವರ ಕನಸನ್ನು ನನಸಾಗಿಸಬೇಕಾಗಿದೆ.**



ಮತ್ತು ವಿಶೇಷವಾಗಿ ಸುಮಾರು ವರ್ಷಗಳಿಂದ ಹಾಲುಮತ ಸಂಸ್ಕೃತಿಯ ವೈಭವ ನಾಡಿಗೆ ತೋರಿಸಿಕೊಟ್ಟಂತಹ ಕೀರ್ತಿ ಪೂಜ್ಯರಿಗೆ ಸಲ್ಲುತ್ತದೆ. ಬಹಳ ಸರಳ ವ್ಯಕ್ತಿತ್ವ ಹೊಂದಿದ್ದ ಶ್ರೀ ಗಳು ಶರಣ ಸಂಸ್ಕೃತಿಗೆ ಸಂಪೂರ್ಣ ಅರ್ಥವನ್ನು ಕಲ್ಪಿಸಿ ಕೊಟ್ಟಿರುವ ಮಹಾನುಭಾವರು ಮತ್ತು ನೊಂದವರ ಕಷ್ಟಗಳಿಗೆ ನೆರಳಾಗುವ ಮೂಲಕ ಭಕ್ತ ಸಂಕುಲವನ್ನು ಉದ್ಧಾರ ಮಾಡುವ ನಿಟ್ಟಿನಲ್ಲಿ ಹಲವಾರು ಸಾಮಾಜಿಕ ಚಿಂತನೆಗಳನ್ನು ಮೈಗೂಡಿಸಿಕೊಂಡಿದ್ದ ಅಪರೂಪದ ಶರಣರಾಗಿದ್ದವರು ನಮ್ಮ ಸಿದ್ದರಾಮಾನಂದಪುರಿ ಮಹಾಸ್ವಾಮಿಗಳು ಅವರು ಸಮಾಜಕ್ಕೆ ನೀಡಿರುವ ಕೊಡುಗೆ ಅಪಾರವಾಗಿದ್ದು ಅವರ ಆದರ್ಶ ವ್ಯಕ್ತಿತ್ವವನ್ನು ಪ್ರತಿಯೊಬ್ಬ ಭಕ್ತರು ಮೈಗೂಡಿಸಿಕೊಂಡು ಇಷ್ಟು ವರ್ಷಗಳ ಕಾಲ ನಡೆಸಿಕೊಂಡು ಒಗ್ಗಟ್ಟಿನಿಂದ ಬಾಳಿ ಬದುಕಬೇಕು.

ಎಂದು ಕರಿ ಬಸವ ನಗರ ಮೂರನೇ ಕ್ಯಾಂಪ್ ಹಾಗೂ ಕನ್ನೂರಿನ ಶ್ರೀಮದ್ ಜಗದ್ಗುರು ರಂಭಾಪುರಿ ಖಾಸಾ ಶಾಖಾ ಮಠದ ಶ್ರೀ ಷ. ಬ್ರ. ಸೋಮನಾಥ ಶಿವಾಚಾರ್ಯ ಮಹಾಸ್ವಾಮಿಗಳು ಲಿಂಗೈಕ್ಯ ಶ್ರೀ ಸಿದ್ದರಾಮಾನಂದಪುರಿ ಮಹಾಸ್ವಾಮಿಗಳಿಗೆ ನುಡಿ ನಮನ ಸಲ್ಲಿಸಿ ಭಕ್ತ–ರಿಗೆ ಆಶೀರ್ವಚನ ನೀಡಿದರು.ಶ್ರೀ ಹುಲಿಗೆಮ್ಮ ದೇವಿ ದೇವಸ್ಥಾನ ಸಮಿತಿ ಪಿ.ಡಬ್ಲ್ಯೂ.ಡಿ.ಕ್ಯಾಂಪ್ ಸಿಂಧನೂರು ಶ್ರೀ ಶಾಂಭವಿ ಪುಣ್ಯಾಶ್ರಮ ಪಿ.ಡಬ್ಲ್ಯೂ.ಡಿ ಕ್ಯಾಂಪ್ ಸಿಂಧನೂರು ಶ್ರೀಮಠ ಸೇವಾ ಟ್ರಸ್ಟ್ (ರಿ) ಹರೇಟನೂರು ಇವರುಗಳ ವತಿಯಿಂದ ನಗರದ ಒಳಬಳ್ಳಾರಿ ರಸ್ತೆಯಲ್ಲಿರುವ ಕರ್ನಾಟಕ ಸರ್ಕಾರದ ರಾಜ್ಯ ಪ್ರಶಸ್ತಿ ಪುರಸ್ಕೃತ ಸಂಸ್ಥೆಯಾದ ಶ್ರೀಮಠ ಸೇವಾ ಟ್ರಸ್ಟ್ (ರಿ) ಹರೇಟನೂರು ಕಾರುಣ್ಯ ನೆಲೆ ವೃದ್ಧಾಶ್ರಮ ಹಾಗೂ ವಯಸ್ಕರ ಬುದ್ಧಿಮಾಂದ್ಯ ಆಶ್ರಮದಲ್ಲಿ ಕಾಗಿನೆಲೆ ಮಹಾ ಸಂಸ್ಥಾನ ಕಲ್ಬುರ್ಗಿ ವಿಭಾಗದ ತಿಂಥಿಣಿ ಬ್ರಿಜ್ ನ ಶಾಖಾ ಮಠದ ಲಿಂಗೈಕ್ಯ ಶ್ರೀ ಸಿದ್ದರಾಮಾನಂದಪುರಿ ಮಹಾಸ್ವಾಮಿಗಳ ನುಡಿ ನಮನ ಕಾರ್ಯಕ್ರಮ ಶ್ರೀಗಳ ಭಾವಚಿತ್ರಕ್ಕೆ ವಿಶೇಷ ಪೂಜೆಯನ್ನು ಸಲ್ಲಿಸುವ ಮೂಲಕ ಅರ್ಥಪೂರ್ಣವಾಗಿ ನೆರವೇರಿತು.

ಕಾರ್ಯಕ್ರಮದಲ್ಲಿ ಮಾಳಪ್ಪ ಮಾಡಗಿರಿ ಪ್ರಾಸ್ತಾವಿಕವಾಗಿ ಮಾತನಾಡಿ ಸಿದ್ದರಾಮಾನಂದಪುರಿ ಸ್ವಾಮಿಗಳು ಹಾಕಿ ಕೊಟ್ಟಿರುವ ಮಾರ್ಗದಲ್ಲಿ ನಾವು ನಡೆಯುತ್ತೇವೆ ಎಂದು ಮಾತನಾಡಿದರು. ನಂತರ ಕರ್ನಾಟಕ ಪ್ರದೇಶ ಮಹಿಳಾ ಕಾಂಗ್ರೆಸ್ ಸಮಿತಿಯ ರಾಜ್ಯ ಪ್ರಧಾನ ಕಾರ್ಯದರ್ಶಿಗಳಾದ ಡಾ.ನಾಗವೇಣಿ.ಎಸ್. ಪಾಟೀಲ್ ಮಾತನಾಡಿ ಶ್ರೀಗಳು ಬರೀ ಹಾಲುಮತ ಸಮಾಜಕ್ಕೆ ಅಷ್ಟೇ ಮೀಸಲಾಗದೆ ಸರ್ವ ಸಮಾಜದ ಪ್ರೀತಿಯನ್ನು ಗಳಿಸಿದ್ದರು ಇಂತಹ ಶರಣರು ತೋರಿಸಿಕೊಟ್ಟಿರುವ ಮಾರ್ಗವನ್ನು ನಾವೆಲ್ಲರೂ ಅನುಸರಿಸಬೇಕಾಗಿದೆ. ಶ್ರೀಗಳ ಸರಳ ವ್ಯಕ್ತಿತ್ವ ಅವರ ಆದರ್ಶವೇ ನಮ್ಮ ಜೀವನಕ್ಕೆ ಸ್ಫೂರ್ತಿಯಾಗಿದೆ. ನೊಂದವರಿಗೆ ನಾಡಿಮಿಡಿತವಾಗಿ ಅದೆಷ್ಟೋ ಬಡ ವಿದ್ಯಾರ್ಥಿಗಳಿಗೆ ಶಿಕ್ಷಣ ಕೊಡಿಸುವುದಲ್ಲದೆ ಸಂಸ್ಕಾರದ ಪಾಠವನ್ನು ಉಣಬಡಿಸಿ ಶುದ್ಧ ಸಮಾಜಕ್ಕೆ ಕಾರಣರಾಗಿದ್ದರು.

ಇನ್ನು ಮುಂದೆ ಅವರ ನೆನಪನ್ನು ಮಾಡಿಕೊಳ್ಳದೆ ಅವರ ಕನಸುಗಳನ್ನು ಈಡೇರಿಸುವ ಭಕ್ತರು ನಾವಾಗಬೇಕು ಎಂದು ಭಾವನಾತ್ಮಕವಾಗಿ ಮಾತನಾಡಿದರು. ಈ ಕಾರ್ಯಕ್ರಮದಲ್ಲಿ ಸಿಂಧನೂರಿನ ಶ್ರೀ ಶಾಂಭವಿ ಪುಣ್ಯಾಶ್ರಮದ ಪೀಠಾಧಿಪತಿಗಳಾದ ವೇ. ಮೂ. ವೀರೇಶ ಯಡಿಯೂರು ಮಠ. ಹಾಗೂ ಹುಚ್ಚಪ್ಪ ಪೂಜಾರಿ ಸುಕಾಲಪೇಟೆ ಇವರುಗಳು ಸಾನಿಧ್ಯ ವಹಿಸಿದ್ದರು. ಮುಖ್ಯ ಅತಿಥಿಗಳಾಗಿ ಹೊಸಗೇರಪ್ಪ ಗೊರೆಬಾಳ ಅಧ್ಯಕ್ಷರು ಶ್ರೀ ಹುಲಿಗೆಮ್ಮ ದೇವಿ ದೇವಸ್ಥಾನ ಸಮಿತಿ ಸಿಂಧನೂರು. ಮಾಳಪ್ಪ ಮಾಡಗಿರಿ ಸದಸ್ಯರು ಶ್ರೀ ಹುಲಿಗೆಮ್ಮ ದೇವಿ ದೇವಸ್ಥಾನ ಸಮಿತಿ ಸಿಂಧನೂರು. ಮೂಕಪ್ಪ ಬನ್ನದ ಸದಸ್ಯರು ಶ್ರೀ ಹುಲಿಗಮ್ಮ ದೇವಿ ದೇವಸ್ಥಾನ ಸಮಿತಿ, ಸಿಂಧನೂರು. ಶಿವಶರಣಯ್ಯ ಸ್ವಾಮಿ ಗುರುವಿನ ಮಠ ಸಿಂಧನೂರು. ಅನ್ವರ್ ಸಾಬ್ ಬಳಗಾನೂರು ಸಾ. ಸಿಂಧನೂರು. ಹನುಮಂತಪ್ಪ ಮಾಡಿಸಿರವಾರ. ಹಾಗೂ ಆಶ್ರಮದ ಕಾರ್ಯಾಧ್ಯಕ್ಷರಾದ ಡಾ. ಚನ್ನಬಸಯ್ಯಸ್ವಾಮಿ ಹಿರೇಮಠ ಶ್ರೀಮಠ ಸೇವಾ ಟ್ರಸ್ಟ್ ನ ಸದಸ್ಯರಾದ ಸುಜಾತ ಹಿರೇಮಠ. ಆಶ್ರಮದ ಸಿಬ್ಬಂದಿಗಳಾದ ಸುಜಾತ ಮಲದಗುಡ್ಡ. ಸಿದ್ದಯ್ಯ ಸ್ವಾಮಿ. ಮರಿಯಪ್ಪ ಜ್ಯೋತಿ.ಹಾಗೂ ಶ್ರೀ ಹುಲಿಗೆಮ್ಮ ದೇವಿ ದೇವಸ್ಥಾನ ಸಮಿತಿಯ ಸದಸ್ಯರುಗಳು ಮತ್ತು ಹಾಲುಮತ ಸಮಾಜದ ಗುರು ಹಿರಿಯರುಗಳು ಉಪಸ್ಥಿತರಿದ್ದರು

## ನೇಮಕಾತಿ ಪ್ರಕಟಣೆ

UCIL ನೇಮಕಾತಿ 2026–364 ಟ್ರೇಡ್ ಮತ್ತು ಟೆಕ್ನಿಷಿಯನ್ ಅಪ್ರೆಂಟಿಸ್ ಹುದ್ದೆಗಳಿಗೆ ಆನ್‌ಲೈನ್‌ನಲ್ಲಿ ಅರ್ಜಿ ಸಲ್ಲಿಸಿ UCIL ನೇಮಕಾತಿ 2026: 364 ಟ್ರೇಡ್ ಮತ್ತು ಟೆಕ್ನಿಷಿಯನ್ ಅಪ್ರೆಂಟಿಸ್ ಹುದ್ದೆಗಳಿಗೆ ಅರ್ಜಿ ಸಲ್ಲಿಸಿ. ಯುರೇನಿಯಂ ಕಾರ್ಪೊರೇಷನ್ ಆಫ್ ಇಂಡಿಯಾ ಲಿಮಿಟೆಡ್ ಜನವರಿ 2026 ರಲ್ಲಿ UCIL ಅಧಿಕೃತ ಅಧಿಸೂಚನೆಯ ಮೂಲಕ ಟ್ರೇಡ್ ಮತ್ತು ಟೆಕ್ನಿಷಿಯನ್ ಅಪ್ರೆಂಟಿಸ್ ಹುದ್ದೆಗಳನ್ನು ಭರ್ತಿ ಮಾಡಲು ಅರ್ಹ ಮತ್ತು ಆಸಕ್ತ ಅಭ್ಯರ್ಥಿಗಳಿಂದ ಅರ್ಜಿಗಳನ್ನು ಆಹ್ವಾನಿಸಿದೆ. ಪೂರ್ವ ಸಿಂಗ್‌ಭೂಮ್ – ಜಾರ್ಖಂಡ್ ಸರ್ಕಾರದಲ್ಲಿ ವೃತ್ತಿಜೀವನವನ್ನು ಹುಡುಕುತ್ತಿರುವ ಉದ್ಯೋಗಾಕಾಂಕ್ಷಿಗಳು ಈ ಅವಕಾಶವನ್ನು ಬಳಸಿಕೊಳ್ಳಬಹುದು. ಆಸಕ್ತ ಅಭ್ಯರ್ಥಿಗಳು 28–ಫೆಬ್ರವರಿ–2026 ರಂದು ಅಥವಾ ಮೊದಲು ಆನ್‌ಲೈನ್‌ನಲ್ಲಿ ಅರ್ಜಿ ಸಲ್ಲಿಸಬಹುದು. ಆನ್‌ಲೈನ್‌ನಲ್ಲಿ ಅರ್ಜಿ ಸಲ್ಲಿಸಲು ಪ್ರಾರಂಭ ದಿನಾಂಕ: 01–02–2026 ಆನ್‌ಲೈನ್‌ನಲ್ಲಿ ಅರ್ಜಿ ಸಲ್ಲಿಸಲು ಕೊನೆಯ ದಿನಾಂಕ: 28–ಫೆಬ್ರವರಿ–2026 ಅಧಿಕೃತ ವೆಬ್‌ಸೈಟ್: ucil.gov.in

## ಮತದಾನದಲ್ಲಿ ಪ್ರತಿಯೊಬ್ಬರು ಭಾಗವಹಿಸಲು ನ್ಯಾಯಾಧೀಶರಾದ ರೂಪ ಸಿ ವಗ್ಗಾ ಕರೆ

❑ ನೈಜ್ಯ ದೆಸೆ ನ್ಯೂಸ್

**ಈ ದೇಶದ ಪ್ರಜಾಪ್ರಭುತ್ವದಲ್ಲಿ ತಮಗೆ ಬೇಕಾದಂತಹ ನಾಯಕರನ್ನು ಆಯ್ಕೆ ಮಾಡಿಕೊಳ್ಳಲು ಅವಕಾಶವಿದ್ದು, ಪ್ರತಿಯೊಬ್ಬರೂ ತಮ್ಮ ಮತವನ್ನು ಚಲಾಯಿಸಬೇಕು ಎಂದು ಗೌರವಾನ್ವಿತ ಪ್ರಧಾನ ಸಿವಿಲ್ ನ್ಯಾಯಾಧೀಶರಾದ ರೂಪಾ ಸಿ ವಗ್ಗಾ ಕರೆ ನೀಡಿದರು.**




ಶುಕ್ರವಾರದಂದು ನಗರದ ತಾಲೂಕು ಪಂಚಾಯಿತಿ ಸಭಾಂಗಣದಲ್ಲಿ ತಾಲೂಕು ಆಡಳಿತ, ತಾಲೂಕು ಕಾನೂನು ಸೇವಾ ಸಮಿತಿ ಹಾಗೂ ತಾಲೂಕು ಪಂಚಾಯತಿ ವತಿಯಿಂದ ಹಮ್ಮಿಕೊಂಡಿದ್ದ 'ರಾಷ್ಟ್ರೀಯ ಮತದಾರರ ದಿನಾಚರಣೆ' ಕಾರ್ಯಕ್ರಮವನ್ನು ಉದ್ಘಾಟಿಸಿ ಮಾತನಾಡಿದ ಅವರು, ಚುನಾವಣಾ ಆಯೋಗದ ಆಶಯದಂತೆ ನಿರ್ಭೀತಿಯಿಂದ ಚುನಾವಣೆಗಳು ನಡೆಯಬೇಕು. ಈ ನಿಟ್ಟಿನಲ್ಲಿ ಪ್ರತಿಯೊಬ್ಬರು ಶ್ರಮಿಸಬೇಕು. ತಮ್ಮ ಕುಟುಂಬದ ಸದಸ್ಯರು ಯಾವುದೇ ಆಸೆ–ಆಮಿಷಗಳಿಗೆ ಒಳಗಾಗದೆ ಮತ್ತ ಚಲಾಯಿಸಲು ಪ್ರೇರೇಪಿಸಬೇಕು ಎಂದು ಯುವ ಮತದಾರರಿಗೆ ಮತ್ತು ವಿದ್ಯಾರ್ಥಿಗಳಿಗೆ ಸಲಹೆ ನೀಡಿದರು. ತಹಶೀಲ್ದಾರ್ ಅರುಣ್ ಕುಮಾರ್ ದೇಸಾಯಿ ಮಾತನಾಡಿ, ಅರ್ಹ ವಯಸ್ಸಿನ ಎಲ್ಲಾ ವಿದ್ಯಾರ್ಥಿಗಳು, ಯುವಕರು, ಯುವತಿಯರು, ನೋಂದಣಿ ಮಾಡಿಸಿಕೊಳ್ಳಬೇಕು. ನೋಂದಣಿ ಮಾಡಿಸಿಕೊಂಡ ಮತದಾರರು ತಮ್ಮ ಗುರುತಿನ ಚೀಟಿಯನ್ನು ಪಡೆದು ಕಡ್ಡಾಯವಾಗಿ ಮತ ಚಲಾಯಿಸಬೇಕೆಂದು ಹೇಳುತ್ತಾ, ರಾಷ್ಟ್ರೀಯ ಮತದಾರ ದಿನಾಚರಣೆ ನಡೆದು ಬಂದ ಇತಿಹಾಸ, ಚುನಾವಣೆಗಳ ಪ್ರಕ್ರಿಯೆ ಹಾಗೂ ಚುನಾವಣೆ ಯ ಮಹತ್ವದ ಕುರಿತು ವಿದ್ಯಾರ್ಥಿಗಳಿಗೆ ಮಾಹಿತಿ ನೀಡಿದರು. ತಾಲೂಕ ಪಂಚಾಯಿತಿ ಕಾರ್ಯನಿರ್ವಾಹಕ ಅಧಿಕಾರಿ ಚಂದ್ರಶೇಖರ ಮಾತನಾಡಿ, ಚುನಾವಣೆ ಸಂದರ್ಭದಲ್ಲಿ ರಜೆ ನೀಡಿದಾಗ ತಾವು ಎಲ್ಲೇ ಇದ್ದರು ತಮ್ಮ ಹೆಸರು ಇರುವ ಕ್ಷೇತ್ರಗಳಿಗೆ ತೆರಳಿ ಮತದಾನ ಮಾಡಬೇಕು. ಗ್ರಾಮೀಣ ಪ್ರದೇಶಕ್ಕಿಂತ ನಗರ ಪ್ರದೇಶದಲ್ಲಿ ಮತ ಚಲಾವಣೆ ಪ್ರಮಾಣವು ಕಡಿಮೆ ಇದ್ದು, ಇದನ್ನು ಸುಧಾರಿಸಲು ಪ್ರತಿಯೊಬ್ಬ ಮತದಾರರು ಜಾಗೃತರಾಗಬೇಕು ಎಂದರು. ಈ ಸಂದರ್ಭದಲ್ಲಿ: ನಗರಸಭೆ ಪೌರಾಯುಕ್ತ ಪಾಂಡುರಂಗ ಇಟಗಿ, ಸರ್ಕಾರಿ ಅಭಿಯೋಜಕರಾದ ಬಸವರಾಜ, ವಕೀಲರ ಸಂಘದ ಅಧ್ಯಕ್ಷರಾದ ಕೆ. ಭೀಮನಗೌಡ ಮಾತನಾಡಿದರು. ದೈಹಿಕ ಶಿಕ್ಷಣ ವಿಷಯ ಪರೀಕ್ಷಕ ಸೋಮಲಿಂಗಪ್ಪ, ಸಿಡಿಪಿಓ ಲಿಂಗನಗೌಡ, ವಿವಿಧ ಇಲಾಖೆಗಳ ತಾಲೂಕು ಮಟ್ಟದ ಅಧಿಕಾರಿಗಳಾದ ಎಇಇ ಪ್ರಕಾಶ, ಲಿಂಗಪ್ಪ ಅಂಗಡಿ, ವಿಜಯಲಕ್ಷ್ಮಿ, ಮಲ್ಕಾಜಮ್ಮ, ಅಬಕಾರಿ ನಿರೀಕ್ಷಕರು, ಮತದಾರರ ಸಾಕ್ಷರತಾ ಕ್ಲಬ್ (ಈ.ಎಲ್.ಸಿ)ಗಳ ಜಿಲ್ಲಾ ಸಂಪನ್ಮೂಲ ವ್ಯಕ್ತಿ ವೀರೇಶ ಗೋನವಾರ, ನ್ಯಾಯಾಂಗ ಇಲಾಖೆಯ ದೇವರಾಜ, ತಹಶೀಲ್ದಾರ್ ಕಚೇರಿಯ ಉಮಾಪತಿ, ಬಸವರಾಜ, ರಾಜಾಭಕ್ಷಿ, ಶಿಕ್ಷಣ ಸಂಯೋಜಕ ಕುಮಾರಸ್ವಾಮಿ ಸೇರಿದಂತೆ ವಿವಿಧ ಶಾಲಾ ಕಾಲೇಜುಗಳ ಶಿಕ್ಷಕರು, ಉಪನ್ಯಾಸಕರು, ವಿದ್ಯಾರ್ಥಿಗಳು, ಹಾಜರಿದ್ದರು.

# ಅಸ್ಕಿ ಫೌಂಡೇಶನ್ ಸೇವಾ ಕಾರ್ಯ ಶ್ಲಾಘನೀಯ: ಪಾಟೀಲ

❑ ನೈಜ್ಯ ದೆಸೆ ನ್ಯೂಸ್

**ತಾಳಿಕೋಟಿ: ತಮ್ಮ ಫೌಂಡೇಶನ್ ದ ಮೂಲಕ ಸಮಾಜದಲ್ಲಿರುವ ಬಡವರ ಸೇವೆಯನ್ನು ಪಕ್ಷಾತೀತವಾಗಿ ಮಾಡುತ್ತಿರುವ ಸಮಾಜ ಸೇವಕ ಸಿ.ಬಿ.ಅಸ್ಕಿ ಅವರ ಕಾರ್ಯ ಶ್ಲಾಘನೀಯವಾಗಿದ್ದು ನಾವೆಲ್ಲರೂ ಅವರಿಗೆ ಪ್ರೋತ್ಸಾಹಿಸಿ ಸಹಕರಿಸುವ ಅಗತ್ಯ ಇದೆ ಎಂದು ಸಹಕಾರಿ ಬ್ಯಾಂಕ್ ನಿರ್ದೇಶಕ ದ್ಯಾಮನಗೌಡ ಪಾಟೀಲ ಹೇಳಿದರು.**

ಶುಕ್ರವಾರ ತಾಲೂಕಿನ ಮಿಣಜಗಿ ಗ್ರಾಮದ ಶ್ರೀ ಮಾಯಮ್ಮ ದೇವಿ ದೇವಸ್ಥಾನ ಆವರಣದಲ್ಲಿ ಸಿ.ಬಿ.ಅಸ್ಕಿ ಫೌಂಡೇಶನ್ ಕೊಣ್ಣೂರ ವತಿಯಿಂದ ಹಮ್ಮಿಕೊಂಡ ನೂತನ ಕ್ಯಾಲೆಂಡರ್ ವಿತರಣಾ ಕಾರ್ಯಕ್ರಮದಲ್ಲಿ ಅವರು ಮಾತನಾಡಿದರು. ಫೌಂಡೇಶನ್ ಅಧ್ಯಕ್ಷ, ಸಮಾಜ ಸೇವಕ ಸಿ.ಬಿ.ಅಸ್ಕಿ ಅವರು ಗ್ರಾಮಸ್ಥರ ಸನ್ಮಾನವನ್ನು ಸ್ವೀಕರಿಸಿ ಮಾತನಾಡಿ ಮತಕ್ಷೇತ್ರದ




ಪ್ರತಿಮನೆಗೂ ಈ ವರ್ಷದ ನೂತನ ಕ್ಯಾಲೆಂಡರ್ ತಲುಪಿಸುವ ನಿಟ್ಟಿನಲ್ಲಿ ನಮ್ಮ ಫೌಂಡೇಶನ್ ಕೆಲಸ ಮಾಡುತ್ತಿದೆ ಈ ವರ್ಷದ ಕ್ಯಾಲೆಂಡರ್ ವಿಶೇಷ ಹಾಗೂ ವಿನೂತನವಾಗಿದ್ದು ಸಮಗ್ರ ಮಾಹಿತಿಯನ್ನು ಒಳಗೊಂಡಿದೆ ಎಂದು ತಿಳಿಸಿದ ಅವರು ಭಗವಂತನ ಕೃಪೆ ಹಾಗೂ ನಿಮ್ಮೆಲ್ಲರ ಸಹಕಾರದಿಂದ ನಾನು ನನ್ನಿಂದ ಸಾಧ್ಯವಾದಷ್ಟು ಸೇವೆಯನ್ನು ಮಾಡುತ್ತಿದ್ದೇನೆ ನನಗೆ ಇನ್ನೂ ಹೆಚ್ಚಿನ ಸೇವೆಯನ್ನು ಮಾಡುವಂತಾಗಲು ತಾವುಗಳು ನನಗೆ ಶಕ್ತಿಯನ್ನು ನೀಡಬೇಕು ಎಂದರು. ಮುಖಂಡ ಎಂ.ಎನ್.ಬಿರಾದಾರ ಪ್ರಾಸ್ತಾವಿಕವಾಗಿ ಮಾತನಾಡಿದರು.

ಕಾರ್ಯಕ್ರಮದಲ್ಲಿ ಪ್ರಮುಖರಾದ ಜಗನಪ್ಪಗೌಡ ಪಾಟೀಲ,ಬಿ.ಎಂ.ಬಿರಾದಾರ,




ಶಶಿಧರ ಬೆಣ್ಣೂರ,ಬಿ.ಎಚ್.ಬಾಗೇವಾಡಿ, ಎಂ.ಎನ್.ಬಿರಾದಾರ, ಎ.ಎಂ.ಸರ್ಜಾಪುರ, ವೀರೇಶ ಬಾಗೇವಾಡಿ, ಬಿ.ಎಸ್. ಪಾಟೀಲ,ಬಿ.ಎಸ್. ಯೆರನಾಳ, ಈರಣ್ಣ ತೆಕುರ,ಬಿ.ಎಸ್.ಬಿರಾದಾರ, ಮಹಾಂತೇಶ ಬಿರಾದಾರ, ಎಂ.ಜೆ. ಪಾಟೀಲ, ಸಾಹೇಬಣ್ಣ ಅಗ್ನಿ, ಬಾಬುಗೌಡ ಪಾಟೀಲ, ಬೀರಪ್ಪ ಮಂಗ್ಯಾಳ, ಆರ್ ಎಸ್ ಪೂಜಾರಿ, ಬಿ.ಜೆ.ಪೂಜಾರಿ, ಕಾಂಗ್ರೆಸ್ ಕಾಂಗ್ರೆಸ್ ಅಸಂಘಟಿತ ಕಾರ್ಮಿಕರ ಘಟಕದ ಅಧ್ಯಕ್ಷ ಸಂಗನಗೌಡ ಪಾಟೀಲ ಹಾಗೂ ಗ್ರಾಮಸ್ಥರು ಇದ್ದರು.

# ಸನ್ ರೈಸ್ ಕಾಲೇಜಿನಲ್ಲಿ ನೇತಾಜಿ ಸುಭಾಷ್ ಚಂದ್ರ ಬೋಸ್ ಅವರ ಜಯಂತಿ :ಪರಾಕ್ರಮ ದಿನಾಚರಣೆ



❑ ನೈಜ್ಯ ದೆಸೆ ನ್ಯೂಸ್

**ಸನ್ ರೈಸ್ ಡಿ–ಫಾರ್ಮಸಿ, ನರ್ಸಿಂಗ್ ಹಾಗೂ ಪ್ಯಾರಾಮೆಡಿಕಲ್ ಕಾಲೇಜಿನಲ್ಲಿ ನೇತಾಜಿ ಸುಭಾಷ್ ಚಂದ್ರ ಬೋಸ್ ಅವರ ಜಯಂತಿಯನ್ನು 'ಪರಾಕ್ರಮ ದಿವಸ'*ವನ್ನಾಗಿ ಅತ್ಯಂತ ಸಡಗರ ಮತ್ತು ಗೌರವದಿಂದ ಆಚರಿಸಲಾಯಿತು, ನೇತಾಜಿ ಸುಭಾಷ್ ಚಂದ್ರ ಬೋಸ್ ಅವರ ಭಾವಚಿತ್ರಕ್ಕೆ ಪುಷ್ಪ ನಮನ ಸಲ್ಲಿಸುವ ಮೂಲಕ ಕಾರ್ಯಕ್ರಮಕ್ಕೆ ಚಾಲನೆ ನೀಡಲಾಯಿತು.**

ಕಾರ್ಯಕ್ರಮ ಅಧ್ಯಕ್ಷತೆಯನ್ನು ಸಂಸ್ಥೆಯ ಅಧ್ಯಕ್ಷರಾದ ಇರ್ಫಾನ್ ಕೆ ಅವರು ವಹಿಸಿದ್ದರು ಹಾಗೂ ಅಧ್ಯಕ್ಷರಾದ ಇರ್ಫಾನ್ ಕೆ ಅವರು ಮಾತನಾಡಿ ಭಾರತದ ಸ್ವಾತಂತ್ರ್ಯ ಸಂಗ್ರಾಮದ ವೀರ ಸೇನಾನಿ ನೇತಾಜಿಯವರ ತ್ಯಾಗ ಮತ್ತು ಬಲಿದಾನವನ್ನು ಯುವ ಪೀಳಿಗೆಗೆ, ಅದರಲ್ಲೂ ವಿಶೇಷವಾಗಿ ವೈದ್ಯಕೀಯ ಕ್ಷೇತ್ರದ ವಿದ್ಯಾರ್ಥಿಗಳಿಗೆ ಪರಿಚಯಿಸುವುದು ಅತ್ಯಂತ ಅಗತ್ಯವಾಗಿದೆ ಎಂದು ಹೇಳಿದರು, ಕಾಲೇಜಿನ ಪ್ರಾಂಶುಪಾಲರು ಮತ್ತು ಉಪನ್ಯಾಸಕರು ನೇತಾಜಿಯವರ "ಜೈ ಹಿಂದ್" ಘೋಷಣೆ ಮತ್ತು "ನನಗೆ ರಕ್ತ ಕೊಡಿ, ನಾನು ನಿಮಗೆ ಸ್ವಾತಂತ್ರ್ಯ ನೀಡುತ್ತೇನೆ" ಎಂಬ ಸ್ಫೂರ್ತಿದಾಯಕ ಮಾತುಗಳ ಮಹತ್ವವನ್ನು ವಿವರಿಸಿದರು.

ಹಾಗೂ ಸಂಸ್ಥೆಯ ವಿದ್ಯಾರ್ಥಿಗಳು ದೇಶಭಕ್ತಿ ಗೀತೆ ಹಾಗೂ ಭಾಷಣಗಳ ಮೂಲಕ ತಮ್ಮ ಗೌರವ ಸಮರ್ಪಿಸಿದರು,ಯುವ ವೈದ್ಯಕೀಯ ವಿದ್ಯಾರ್ಥಿಗಳಲ್ಲಿ ಶಿಸ್ತು, ದೇಶಪ್ರೇಮ ಮತ್ತು ಸೇವಾ ಮನೋಭಾವನೆಯನ್ನು ಬೆಳೆಸುವುದು ಈ ಆಚರಣೆಯ ಮುಖ್ಯ ಉದ್ದೇಶವಾಗಿತ್ತು ಈ ಕಾರ್ಯಕ್ರಮದಲ್ಲಿ ಸಂಸ್ಥೆಯ ಅಧ್ಯಕ್ಷರಾದ ಇರ್ಫಾನ್ ಕೆ, ಸಂಸ್ಥೆಯ ಕಾರ್ಯದರ್ಶಿಗಳಾದ ಇರ್ಷಾದ್ ಕೆ ಮತ್ತು ಡಿ–ಫಾರ್ಮಸಿ, ನರ್ಸಿಂಗ್,ಪ್ಯಾರಾಮೆಡಿಕಲ್ ವಿಭಾಗದ ಪ್ರಾಂಶುಪಾಲರುಗಳು,ಎಲ್ಲಾ ವಿಭಾಗದ ಉಪನ್ಯಾಸಕರು ಹಾಗೂ ಎಲ್ಲಾ ವಿಭಾಗದ ವಿದ್ಯಾರ್ಥಿಗಳು ಉಪಸ್ಥಿತರಿದ್ದರು.

# ತಾಲೂಕು ಕುರುಬರ ಸಂಘದ ವತಿಯಿಂದ ಲಿಂ. ಶ್ರೀ ಸಿದ್ದರಾಮಾನಂದಸ್ವಾಮೀಜಿಗಳಿಗೆ ನುಡಿ ನಮನ

❑ ನೈಜ್ಯ ದೆಸೆ ನ್ಯೂಸ್

**ಮಾನ್ವಿ: ಪಟ್ಟಣದ ವಿಶ್ವಜ್ಯೋತಿ ಕನಕದಾಸ ವಸತಿ ನಿಲಯದ ಸಭಾಂಗಣದಲ್ಲಿ ತಾಲೂಕು ಕುರುಬರ ಸಂಘದ ವತಿಯಿಂದ ಕಾಗಿನೆಲೆ ಮಹಾಸಂಸ್ಥಾನ ಕನಕ ಗುರುಪೀಠದ ಶಾಖಮಠ ತಿಂತಿಣಿ ಬ್ರಿಜ್ ಲಿಂ. ಶ್ರೀ ಸಿದ್ದರಾಮಾನಂದ ಸ್ವಾಮೀಜಿಗಳಿಗೆ ನುಡಿನಮನ ಸಲ್ಲಿಸಿ ತಾ.ಗ್ಯಾರಂಟಿ ಸಮಿತಿಯ ಅಧ್ಯಕ್ಷರಾದ ಬಿ.ಕೆ.ಅಂಬರೇಶಪ್ಪ ವಕೀಲರು ಮಾತನಾಡಿ ಲಿಂ. ಶ್ರೀ ಸಿದ್ದರಾಮಾನಂದ ಸ್ವಾಮೀಜಿಗಳು ತಿಂತಿಣೆ ಬ್ರಿಜ್ ಹತ್ತಿರ ಕಾಗಿನೆಲೆ ಮಹಾಸಂಸ್ಥಾನ ಕನಕ ಗುರುಪೀಠದ ಶಾಖಮಠವನ್ನು ಕಟ್ಟಿ ನಿರಂತರವಾಗಿ.**

ಹಾಲುಮತ ವೈಭವ ಕಾರ್ಯಕ್ರಮವನ್ನು ಎಲ್ಲಾ ಜಾತಿ ಧರ್ಮದವರನ್ನು



ಒಳಗೊಂಡಂತೆ ಅಯೋಜಿಸುವ ಮೂಲಕ ನಮ್ಮ ಕುರುಬ ಸಮಾಜವನ್ನು ರಾಜ್ಯದಲ್ಲಿ ಗುರುತಿಸುವಂತೆ ಮಾಡಿದರು. ಶ್ರೀಗಳು ಕೇವಲ ಹಾಲುಮತ ಸಮುದಾಯಕ್ಕೆ ಮಾತ್ರ ಸಿಮೀತರಾಗದ ಸಮಾಜದ ಎಲ್ಲಾ ವರ್ಗದ ಜನರಿಗೆ ಅಚ್ಚುಮೆಚ್ಚಿನ ಗುರುಗಳಾಗಿದ್ದರು ಅವರು ಮಾನ್ವಿ ತಾಲೂಕಿನ ಎಲ್ಲಾ ಗ್ರಾಮಗಳಲ್ಲಿ ಸಂಚಾರಿಸಿ ಪ್ರವಚನವನ್ನು ನೀಡುವ ಮೂಲಕ ಎಲ್ಲಾ ಸಮುದಾಯದವರು ಸನ್ಮಾರ್ಗದಲ್ಲಿ ನಡೆಯುವಂತೆ ಮಾರ್ಗದರ್ಶನವನ್ನು ನೀಡಿರುವುದನ್ನು ಸ್ಮರಿಸಿಕೊಳ್ಳಬಹುದಾಗಿದೆ ಎಂದು ತಿಳಿಸಿದರು. ತಾ.ಅಧ್ಯಕ್ಷ ಸತ್ಯನಾರಾಯಣ ವಕೀಲರು ಮುಷ್ಟೂರು ಮಾತನಾಡಿದರು. ಕಾರ್ಯಕ್ರಮದಲ್ಲಿ ಬೀರಪ್ಪಪೂಜಾರಿ ಹಳ್ಳಿಹೊಸುರ್, ಬೀರಪ್ಪಪೂಜಾರಿ ಮುಷ್ಟೂರು, ಬಿ.ಕೆ. ಅಮರೇಶಪ್ಪ, ಕೆ.ಬಸವಂತಪ್ಪ, ಡಾ,ಯಂಕನಗೌಡ ಪಾಟೀಲ್ ಬೊಮ್ಮನಾಳ,ಡಿ.ವೆಂಕಟೇಶಪ್ಪ, ಬಸವರರಾಜ ಭೋಗವತಿ, ಈರಣ್ಣ ಮಾರ್ಲಟ್ಟಿ, ಬಸವರಾಜ ಕನ್ನಾರಿ, ರಾಹುಲ್ ಕಲಂಗೇರಾ, ಶಿವಶಂಕರ್ ಗೌಡ ಬಾಗಲವಾಡ್, ಅಜಯಕುಮಾರ್,ದುರುಗಪ್ಪ ತಡಕಲ್ ,ವಿಜಯಕುಮಾರ್ ಸಾಹುಕಾರ್ ಉದ್ಬಳ,ವೆಂಕನಗೌಡ ನಿವೃತ್ತ ಎ.ಎಸ್.ಐ. ಬೊಮ್ಮನಾಳ,ಬಸವರಾಜ್, ಹನುಮಂತ ಗೌಡ ಬೊಮ್ಮನಾಳ,ಭೀಮನಗೌಡ ಮುಷ್ಟೂರು,ಮಹಾಂತೇಶ ಒಲೇಕರ್, ಮಹದೇವಪ್ಪ ಹಳ್ಳಿಹೊಸೂರ,ಅಯ್ಯಪ್ಪ ಮೇಟಿ ಉದ್ಬಳ,ದೇವೇಗೌಡ ಉದ್ಬಳ,ಹನುಮಂತ.ಡಿ.ಗುರಿಕಾರ, ಪವನಕುಮಾರ್ ಪೂಜಾರಿ ಹರವಿ ಸೇರಿದಂತೆ ಕುರುಬ ಸಮಾಜದ ಮುಖಂಡರು ಭಾಗವಹಿಸಿದರು.

## ದಾಸಿಮಯ್ಯ ವೃತ್ತ ಉದ್ಘಾಟನೆಗೂ ಸಾಕ್ಷಿಯಾದ ಶಂಕರೋತ್ಸವ | ಸಿಂಪಿ ಸಮಾಜದ ಐತಿಹಾಸಿಕ ಕ್ಷಣ

❑ ನೈಜ್ಯ ದೆಸೆ ನ್ಯೂಸ್

**ಮಸ್ಕಿ: ಜ,23: ಮಸ್ಕಿ ತಾಲ್ಲೂಕಿನಲ್ಲಿ ಸಿಂಪಿ ಸಮಾಜದ ಕುಲ ದೈವ ಶ್ರೀ ಜಡೆಶಂಕರಲಿಂಗ ದೇವರ 26ನೇ ವಾರ್ಷಿಕೋತ್ಸವವನ್ನು ಅತ್ಯಂತ ಅದ್ದೂರಿ ಹಾಗೂ ಧಾರ್ಮಿಕ ಸಂಭ್ರಮದೊಂದಿಗೆ ಆಚರಿಸಲಾಯಿತು.**

ಶ್ರೀ ಭ್ರಮರಾಂಬ ದೇವಸ್ಥಾನದಿಂದ ಆರಂಭವಾದ ಕುಂಬೋತ್ಸವದೊಂದಿಗೆ ಶಂಕರ ದೇವರ ಪಲ್ಲಕ್ಕಿ ಉತ್ಸವ ನಗರದೆಲ್ಲೆಡೆ



ಸಂಚರಿಸಿತು. ಡೊಳ್ಳಿನ ಸದ್ದು, ಹಾಡು–ಕುಣಿತ, ಭಕ್ತರ ಜಯಘೋಷಗಳ ನಡುವೆ ನಗರದ ಪ್ರಮುಖ ಬೀದಿಗಳಲ್ಲಿ ನಡೆದ ಮೆರವಣಿಗೆ ಜನಮನ ಸೆಳೆಯಿತು. ಭಕ್ತರು ಉತ್ಸಾಹದಿಂದ ಭಾಗವಹಿಸಿ ಶ್ರೀ ಶಂಕರಲಿಂಗ ದೇವರ ಕೃಪೆಗೆ ಪಾತ್ರರಾದರು. ಈ ಸಂದರ್ಭದಲ್ಲಿ ಪಟ್ಟಣದ ಬಳಗಾನೂರು ಕ್ರಾಸ್ ಸಮೀಪ ದಾಸಿಮಯ್ಯ ವೃತ್ತದ ಉದ್ಘಾಟನೆ ಕೂಡ ನೆರವೇರಿತು.

ಕಾರ್ಯಕ್ರಮದಲ್ಲಿ ಇಲಕಲ್ಲಿನ ಮಹಾಂತಪ್ಪ ಚೆನ್ನಿ, ಕಮತಗಿಯ ರಾಚಪ್ಪ ಸರಡಗಿ, ಸಿಂಪಿ ಸಮಾಜದ ಹಿರಿಯರು, ಮಸ್ಕಿ ಪುರಸಭೆಯ ಅಧ್ಯಕ್ಷರಾದ ಸುರೇಶ್ ಹರಸೂರ್, ಶ್ರೀಧರ್ ಬಳ್ಳೊಳ್ಳಿ, ದೊಡ್ಡಪ್ಪ ಬುಳ್ಳ, ಪಂಪಣ್ಣ ನಾಗಲಿಕರ್ ಸೇರಿದಂತೆ ಸಮಾಜದ ಮುಖಂಡರು, ಯುವಕರು ಹಾಗೂ ಅಪಾರ ಸಂಖ್ಯೆಯ ಭಕ್ತರು ಭಾಗವಹಿಸಿ ಕಾರ್ಯಕ್ರಮವನ್ನು ಯಶಸ್ವಿಗೊಳಿಸಿದರು. ಒಟ್ಟಾರೆ ಧಾರ್ಮಿಕ ಭಕ್ತಿ, ಸಾಮಾಜಿಕ ಏಕತೆ ಮತ್ತು ಸಂಸ್ಕೃತಿಯ ವೈಭವವನ್ನು ಸಾರಿದ ಶಂಕರೋತ್ಸವ ಮಸ್ಕಿಯಲ್ಲಿ ವಿಶೇಷ ಛಾಪು ಮೂಡಿಸಿತು.

# ರಾಯಚೂರು ಜಿಲ್ಲೆಯನ್ನು ಆನೆಕಾಲು ರೋಗಮುಕ್ತ ಮಾಡಲು, ರಾತ್ರಿ ವೇಳೆಯ ರಕ್ತಲೇಪನ ಕಾರ್ಯಕ್ಕೆ ತಪ್ಪದೆ ಕೈಜೊಡಿಸಿ :ಡಾ ಸುರೇಂದ್ರಬಾಬು.

❑ ನೈಜ್ಯ ದೆಸೆ ನ್ಯೂಸ್

**ರಾಯಚೂರು: ಜಿಲ್ಲೆಯಲ್ಲಿ ಆನೆಕಾಲು ರೋಗದ ಹೊಸ ಪ್ರಕರಣಗಳ ಸಂಪೂರ್ಣ ನಿಯಂತ್ರಣಕ್ಕಾಗಿ ರೋಗ ಪತ್ತೆ ಹಚ್ಚಲು, ಆಯ್ದ ಗ್ರಾಮಗಳು, ವಲಸೆ ಪ್ರದೇಶಗಳಲ್ಲಿ ರೋಗ ಪತ್ತೆಗಾಗಿ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆಯ ವೈದ್ಯಕೀಯ ತಂಡ ರಾತ್ರಿ ವೇಳೆ ಕೈಗೊಳ್ಳುವ ರಕ್ತ ಲೇಪನ ಕಾರ್ಯಕ್ಕೆ ಸಹಕರಿಸಿ ಆನೆಕಾಲು ಮುಕ್ತ ರಾಯಚೂರು ಜಿಲ್ಲೆಯಾಗಿಸಲು ಸಾರ್ವಜನಿಕರಲ್ಲಿ ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣಾಧಿಕಾರಿ ಡಾ ಸುರೇಂದ್ರಬಾಬು ವಿನಂತಿಸಿದರು.**

ದೇವದುರ್ಗ ತಾಲೂಕಿನ ಗಬ್ಬೂರು ಪ್ರಾಥಮಿಕ ಅರೋಗ್ಯ ಕೇಂದ್ರ ವ್ಯಾಪ್ತಿಯ ಖಾನಾಪೂರು ಗ್ರಾಮದಲ್ಲಿ ರಾತ್ರಿ ವೇಳೆ ಹಮ್ಮಿಕೊಂಡ ರಕ್ತಲೇಪನ ಕಾರ್ಯವನ್ನು ಖುದ್ದು ಪರಿಶೀಲಿಸಿ ಜನತೆಯೊಂದಿಗೆ ಮಾತನಾಡಿ ಸಮುದಾಯದಲ್ಲಿ ನಮ್ಮೊಂದಿಗೆ ಹಲವು ವಿಧದ ಸೊಳ್ಳೆಗಳು ಇದ್ದು ಅದರಲ್ಲಿ ಕ್ಯೂಲೆಕ್ಸ್ ಸೊಳ್ಳೆಯು,




ಆನೆಕಾಲು ರೋಗ ಹೊಂದಿದ ವ್ಯಕ್ತಿಗೆ ಕಚ್ಚಿ ಅದೆ ಸೊಳ್ಳೆ ಇನ್ನೊಬ್ಬರಿಗೆ ಕಚ್ಚಿದಾಗ ಬರಿಗಣ್ಣಿಗೆ ಕಾಣದ 'ವುಚೆರೇರಿಯಾ ಬ್ಯಾಂಕ್ರೋಫ್ಟಿ' 'ಬ್ರೂಗಿಯಾ ಮಲಾಯಿ' ಎಂಬ ಪರಾವಲಂಬಿ ನೂಲಿನಂತಹ ಹುಳುಗಳನ್ನು ಅವರ ದೇಹಕ್ಕೆ ವರ್ಗಾಯಿಸುತ್ತವೆ. ಈ ಹುಳುಗಳು ರಕ್ತ ಮತ್ತು ದುಗ್ಧರಸನಾಳಗಳಲ್ಲಿ ಬೆಳೆದು, ದ್ರವ ಹರಿಯದಂತೆ ತಡೆಯುತ್ತವೆ, ಇದರಿಂದ ಕೈ ಕಾಲುಗಳು ಆನೆಯ ಕಾಲಿನಂತೆ ದಪ್ಪವಾಗುವ ಮೂಲಕ ಶಾಶ್ವತವಾಗಿ ಆನೆಕಾಲು ರೋಗಕ್ಕೆ ಕಾರಣವಾಗುತ್ತಿದ್ದು, ಜೋತೆಗೆ ಒಮ್ಮೆ ಬಂದರೆ ಜೀವನ ಪರ್ಯಂತ ಕಾಡುವ ಆನೆಕಾಲು ರೋಗಿಯಾಗುವುದನ್ನು ಗುರ್ತಿಸಿ ಆರಂಭದಲ್ಲಿಯೇ ತಡೆಗಟ್ಟಲು ರಾತ್ರಿ ವೇಳೆ ಆರೋಗ್ಯ ಇಲಾಖೆಯ ಜಿಲ್ಲೆಯಲ್ಲಿ ಈಗಾಗಲೆ ಎಲ್ಲ ತಾಲುಕುಗಳ ಆಯ್ದ ಗ್ರಾಮಗಳಲ್ಲಿ, ನಗರದ ವಾರ್ಡ್‌ಗಳಲ್ಲಿ ರಾತ್ರಿ ವೇಳೆ ರಕ್ತ ಲೇಪನ ಕಾರ್ಯ ಕೈಗೊಳ್ಳಲಾಗುತ್ತಿದ್ದು ಜನತೆಯು ಸಹಕರಿಸಿ ಎಂದು ವಿನಂತಿಸಿದರು.

ಜಿಲ್ಲಾ ಸರ್ವೆಕ್ಷಣಾಧಿಕಾರಿ ಡಾ ಗಣೇಶ ಕೆ ಮಾತನಾಡಿ, ಸಾಮಾನ್ಯವಾಗಿ ಆನೆಕಾಲು ರೋಗ ವ್ಯಕ್ತಿಯಲ್ಲಿ ಕಂಡುಬರಲು ಧಿರ್ಘಾವಧಿ ತೆಗೆದುಕೊಳ್ಳುತ್ತದೆ. ಆರಂಭದಲ್ಲಿ ಜ್ವರ ಮತ್ತು ಚಳಿ, ಚರ್ಮದ ಮೇಲೆ ಸೋಂಕು ಹಾಗೂ ಕಾಲುಗಳು, ತೋಳುಗಳು, ಸ್ತನಗಳು ಅಥವಾ ಜನನಾಂಗದ ಭಾಗಗಳಲ್ಲಿ ಊತ ಕಂಡುಬರುತ್ತದೆ. ಕ್ರಮೇಣ ಚರ್ಮವು ದಪ್ಪವಾಗಿ, ಗಟ್ಟಿಯಾಗಿ, ಗರುಸಾಗಿ ಆನೆ ಚರ್ಮದಂತೆ ಕಾಣಿಸುವುದು. ಇದರಿಂದ ಅತಿಯಾದ ನೋವು ಮತ್ತು ನಡೆಯಲು ಕಷ್ಟವಾಗುವುದು. ಇದನ್ನು ರೋಗ ಲಕ್ಷಣಗಳನುಸಾರ ನಿರ್ವಹಣೆ ಚಿಕಿತ್ಸೆ ಮಾತ್ರ ಸಾಧ್ಯವಿದ್ದು,

ಸಂಪೂರ್ಣ ಗುಣಪಡಿಸಲು ಕಷ್ಟಕರ. ಈ ಹಿನ್ನಲೆ ಮನೆಯ ಸುತ್ತಲು ಚರಂಡಿ, ತಿಪ್ಪೆಗಳ ಹತ್ತಿರ ಅನುಪಯುಕ್ತ ನೀರು ನಿಲ್ಲದಂತೆ ಹಾಗೂ ಮನೆ ಹೊಲ, ಗದ್ದೆಗಳಲ್ಲಿ ಕೆಲಸ ಮಾಡುವಾಗ ಸೊಳ್ಳೆಯಿಂದ ಕಚ್ಚಿಸಿಕೊಳ್ಳದಂತೆ ಜಾಗೃತಿ ವಹಿಸಲು ವಿನಂತಿಸಿದರು. ಈ ಸಂದರ್ಭದಲ್ಲಿ 105 ಜನರ ಮೇಲೆ ರಕ್ತ ಲೇಪನವನ್ನು ಪ್ರಾಥಮಿಕ ಆರೋಗ್ಯ ಕೇಂದ್ರದ ಆಡಳಿತ ವೈದ್ಯಾಧಿಕಾರಿ ಡಾ ಸಿದ್ರಾಮೇಶ, ಹಿರಿಯ ಆರೋಗ್ಯ ನಿರೀಕ್ಷಣಾಧಿಕಾರಿ ಹನುಮಂತರಾಯ ಹೂಗಾರ್, ಪ್ರಾಥಮಿಕ ಆರೋಗ್ಯ ಸುರಕ್ಷಣಾಧಿಕಾರಿ ಈರಾಕ್ಷಣಿ, ಸಿಹೆಚ್‌ಓ ಹರೀಶ್, ಆಶಾ ಕಾರ್ಯಕರ್ತೆ ಸಾಬಮ್ಮ ಸೇರಿದಂತೆ ಅಂಗನವಾಡಿ ಕಾರ್ಯಕರ್ತೆಯರ ತಂಡದ ಮೂಲಕ ಕೈಗೊಂಡರು. ಸಾರ್ವಜನಿಕರು ಆಗಮಿಸಿ ಪರೀಕ್ಷೆಗೆ ಸಹಕರಿಸಿದರು.

## ಶಿಕ್ಷಣ ಮಾರ್ಗದರ್ಶಿ ವಿಶೇಷ

### ಬಿ.ಎಸ್ಸಿ ಎಮರ್ಜೆನ್ಸಿ ಮೆಡಿಸಿನ್ ಟೆಕ್ನಾಲಜಿ

ಬಿ.ಎಸ್ಸಿ ಎಮರ್ಜೆನ್ಸಿ ಮೆಡಿಸಿನ್ ಟೆಕ್ನಾಲಜಿ (BSc Emergency Medicine Technology) 3–4 ವರ್ಷಗಳ ಪದವಿ ಕೋರ್ಸ್ ಆಗಿದೆ,ತುರ್ತು ವೈದ್ಯಕೀಯ ಪರಿಕಲ್ಪನೆಯು ಭಾರತೀಯ ವೈದ್ಯಕೀಯ ಜಗತ್ತಿಗೆ ತುಲನಾತ್ಮಕವಾಗಿ ಹೊಸದು, ಆದರೆ ಹೆಚ್ಚಿನ ಅಭಿವೃದ್ಧಿ ಹೊಂದಿದ ದೇಶಗಳಲ್ಲಿ ಇದು ಆರೋಗ್ಯ ವ್ಯವಸ್ಥೆಯ ಬೆನ್ನೆಲುಬಾಗಿದೆ. ಬಿ.ಎಸ್ಸಿ. ತುರ್ತು ವೈದ್ಯಕೀಯ ತಂತ್ರಜ್ಞಾನವು ನಾಲ್ಕು ವರ್ಷಗಳ ಪದವಿಪೂರ್ವ ಕೋರ್ಸ್ ಆಗಿದ್ದು, ಇದರಲ್ಲಿ ಒಂದು ವರ್ಷದ ಕಡ್ಡಾಯ ಇಂಟರ್ನ್‌ಶಿಪ್ ಕಾರ್ಯಕ್ರಮವೂ ಸೇರಿದೆ. ತುರ್ತು ವೈದ್ಯಕೀಯ ಕ್ಷೇತ್ರವು ಎಲ್ಲಾ ವಯೋಮಾನದ ರೋಗಿಗಳ ಮೇಲೆ ಪರಿಣಾಮ ಬೀರುವ ಅನಾರೋಗ್ಯ ಮತ್ತು ಗಾಯದ ತೀವ್ರ ಮತ್ತು ತುರ್ತು ಅಂಶಗಳ ತಡೆಗಟ್ಟುವಿಕೆ, ರೋಗನಿರ್ಣಯ ಮತ್ತು ನಿರ್ವಹಣೆಗೆ ಅಗತ್ಯವಾದ ಜ್ಞಾನ ಮತ್ತು ಕೌಶಲ್ಯಗಳನ್ನು ಆಧರಿಸಿದ ಅಭ್ಯಾಸದ ಕ್ಷೇತ್ರವಾಗಿದೆ. ಇದು ಸಮಯವು ನಿರ್ಣಾಯಕವಾಗಿರುವ ವಿಶೇಷತೆಯಾಗಿದೆ. ತುರ್ತು ವೈದ್ಯಕೀಯ ತಂಡವು ತೀವ್ರ ತುರ್ತು ಪರಿಸ್ಥಿತಿಯಲ್ಲಿರುವ ರೋಗಿಯನ್ನು ನೋಡಿಕೊಳ್ಳುತ್ತದೆ. ಎಲ್ಲಾ ಆರಂಭಿಕ ಪುನರುಜ್ಜೀವನವನ್ನು ತುರ್ತು ವೈದ್ಯರು, ತಂತ್ರಜ್ಞರು ಮತ್ತು ಇತರ ಅರೆವೈದ್ಯಕೀಯ ಸಿಬ್ಬಂದಿಯನ್ನು ಒಳಗೊಂಡ ತುರ್ತು ವೈದ್ಯಕೀಯ ತಂಡವು ಮಾಡುತ್ತದೆ. ಈ ಕೋರ್ಸ್ ತುರ್ತು ಕೋಣೆಗೆ ಬರುವ ರೋಗಿಯ ಆರಂಭಿಕ ಪುನರುಜ್ಜೀವನದ ಮೇಲೆ ತರಬೇತಿ ನೀಡುತ್ತದೆ ಮತ್ತು ಕೇಂದ್ರೀಕರಿಸುತ್ತದೆ. ಆಘಾತ ಮತ್ತು ನೈಸರ್ಗಿಕ ವಿಕೋಪಗಳ ಸಂಖ್ಯೆ ದಿನದಿಂದ ದಿನಕ್ಕೆ ಹೆಚ್ಚುತ್ತಿರುವಂತೆ, ತುರ್ತು ಔಷಧವು ಸಮಯದ ಅಗತ್ಯವಾಗಿದೆ.ಇದು ತುರ್ತು ವೈದ್ಯಕೀಯ ಸಂದರ್ಭಗಳಲ್ಲಿ ರೋಗಿಗಳನ್ನು ಸ್ಥಿರಗೊಳಿಸಲು ಮತ್ತು ಜೀವ ಉಳಿಸುವ ತಂತ್ರಗಳಲ್ಲಿ ತರಬೇತಿ ನೀಡುತ್ತದೆ. 12ನೇ ತರಗತಿಯಲ್ಲಿ ವಿಜ್ಞಾನ (PCB) ವಿಷಯಗಳೊಂದಿಗೆ ಕನಿಷ್ಠ 50% ಅಂಕ ಪಡೆದವರು ಅರ್ಹರು. ಇದು ಆಸ್ಪತ್ರೆಯ ತುರ್ತು ವಿಭಾಗಗಳು, ಆಂಬ್ಯುಲೆನ್ಸ್ ಸೇವೆಗಳು ಮತ್ತು ಆಘಾತ ಕೇಂದ್ರಗಳಲ್ಲಿ (Trauma Centers) ಉತ್ತಮ ವೃತ್ತಿಜೀವನದ ಅವಕಾಶಗಳನ್ನು ಒದಗಿಸುತ್ತದೆ. BSc ಎಮರ್ಜೆನ್ಸಿ ಮೆಡಿಸಿನ್ ಟೆಕ್ನಾಲಜಿ ಕೋರ್ಸ್ ವಿವರಗಳು: ಕೋರ್ಸ್ ಅವಧಿ: 3 ವರ್ಷಗಳ ತರಬೇತಿ + 1 ವರ್ಷದ ಕಡ್ಡಾಯ ಇಂಟರ್ನ್‌ಶಿಪ್ (ಒಟ್ಟು 4 ವರ್ಷಗಳು). ಅರ್ಹತೆ: ಪಿಯುಸಿ/12ನೇ ತರಗತಿಯಲ್ಲಿ ಭೌತಶಾಸ್ತ್ರ, ರಸಾಯನಶಾಸ್ತ್ರ, ಮತ್ತು ಜೀವಶಾಸ್ತ್ರ (PCB) ವಿಷಯಗಳಲ್ಲಿ ಉತ್ತೀರ್ಣರಾಗಿರಬೇಕು, ಕನಿಷ್ಠ 50% ಅಂಕಗಳನ್ನು ಹೊಂದಿರಬೇಕು. ಮೂಲ ಜೀವ ಬೆಂಬಲ (BLS) ಮತ್ತು ಸುಧಾರಿತ ಜೀವ ಬೆಂಬಲ (ALS). ಆಘಾತ ನಿರ್ವಹಣೆ (Trauma Management) ಮತ್ತು ಪ್ರಥಮ ಚಿಕಿತ್ಸೆ. ವೆಂಟಿಲೇಟರ್‌ಗಳು, ಇಸಿಜಿ (ECG) ಯಂತ್ರಗಳು, ಮತ್ತು ಡಿಫಿಬ್ರಿಲೇಟರ್‌ಗಳ ಬಳಕೆ. ಆಂಬ್ಯುಲೆನ್ಸ್ ಸೇವೆಗಳು ಮತ್ತು ತುರ್ತು ಪ್ರತಿಕ್ರಿಯೆ. ಪ್ರವೇಶ ಪ್ರಕ್ರಿಯೆ: ಮೆರಿಟ್ ಆಧಾರದ ಮೇಲೆ (PUC ಅಂಕಗಳು) ಅಥ-'ವಾ ಕೆಲವು ಕಾಲೇಜುಗಳಲ್ಲಿ ಪ್ರವೇಶ ಪರೀಕ್ಷೆಗಳ ಮೂಲಕ ಪ್ರವೇಶ ನೀಡಲಾಗುತ್ತದೆ. ಉದ್ಯೋಗ ಅವಕಾಶಗಳು: ತುರ್ತು ವಿಭಾಗದ ತಂತ್ರಜ್ಞರು (Emergency Department Technicians). ಆಂಬ್ಯುಲೆನ್ಸ್ ಪ್ಯಾರಾಮೆಡಿಕ್ ಸಿಬ್ಬಂದಿ. ಐಸಿಯು (ICU) ಟೆಕ್ನಾಲಜಿಸ್ಟ್. ಟ್ರಾಮಾ ಕೇರ್ ಸೆಂಟ-ರ್ ಸಹಾಯಕರು. ಈ ಕೋರ್ಸ್ ಆಸ್ಪತ್ರೆಗಳಲ್ಲಿ ಜೀವ ಉಳಿಸುವ ತುರ್ತು ಸೇವೆಗಳಲ್ಲಿ ಕೆಲಸ ಮಾಡಲು ಆಸಕ್ತಿ ಹೊಂದಿರುವ ವಿದ್ಯಾರ್ಥಿಗಳಿಗೆ ಸೂಕ್ತವಾಗಿದೆ. ಅರ್ಹತೆ: ಭೌತಶಾಸ್ತ್ರ, ರಸಾಯನಶಾಸ್ತ್ರ ಮತ್ತು ಜೀವಶಾಸ್ತ್ರದಲ್ಲಿ ಶೇ 60 ರಷ್ಟು ಒಟ್ಟು ಅಂಕಗಳೊಂದಿಗೆ ಪ್ಲಸ್ ಟು ಉತ್ತೀರ್ಣ. ಪ್ರತಿ ಪ್ರವೇಶ ವರ್ಷದ ಡಿಸೆಂಬರ್ 31 ಕ್ಕೆ ಅಭ್ಯರ್ಥಿಗಳು ಕನಿಷ್ಠ 17 ವರ್ಷಗಳು ಮತ್ತು ಗರಿಷ್ಠ 23 ವರ್ಷಗಳು ಆಗಿರಬೇಕು.

# ಯೂತ್ ಗೇಮ್ಸ್ ಕೌನ್ಸಿಲ್ ಇಂಡಿಯಾ ಅಂತರಾಷ್ಟ್ರೀಯ ಮಟ್ಟಕ್ಕೆ ಜೀಶಾನ್ ರಿಸಾಲ್ದಾರ್ ಆಯ್ಕೆ

**ನೈಜ್ಯ ದೆಸೆ ನ್ಯೂಸ್**

**ಮುದ್ದೇಬಿಹಾಳ: ಮುದ್ದೇಬಿಹಾಳ ಬಸವ ಇಂಟ-ರ್ನ್ಯಾಷನಲ್ ಸಿಬಿಎಸ್‌ಇ ಶಾಲೆಯ ವಿದ್ಯಾರ್ಥಿ ಕುಮಾರ್ ಮೊಮ್ಮದ್ ಜಿಶಾನ್ ಸೂರಜ್ ರಿಸಾಲ್ದಾರ್ ಇವರು ಕರ್ನಾಟಕ ರಾಜ್ಯದ ಪರವಾಗಿ ಗೋವಾ ರಾಜ್ಯದಲ್ಲಿ ಯುಥ್ ಗೇಮ್ಸ್ ಇಂಡಿಯಾ ಹಮ್ಮಿಕೊಂಡಿರುವ ರಾಷ್ಟ್ರೀಯ ಮಟ್ಟದ ಅಂಡರ್ 10 ನಲ್ಲಿ ಅಥ್ಲೇಟಿಕ್ ಸ್ಪರ್ಧೆ 100 ಮೀಟ-ರ್ ಓಟದಲ್ಲಿ 15 ಸೆಕೆಂಡ್ ನಲ್ಲಿ ಓಟವನ್ನು ಪೂರ್ಣಗೊಳಿಸಿ ಪ್ರಥಮ ಸ್ಥಾನ ಪಡೆದಿದ್ದಾರೆ.**

ಕರ್ನಾಟಕದ ಪರವಾಗಿ ಸ್ಪರ್ಧೆಯಲ್ಲಿ ಭಾಗವಹಿಸಿ ವಿಜೇತರಾದ ಮೊಹಮ್ಮದ್ ಜಿಶಾನ್ ಸೂರಜ್ ರಿಸಾಲ್ದಾರ್ ಈಗ ಅಂತರಾಷ್ಟ್ರೀಯ ಮಟ್ಟಕ್ಕೆ ಆಯ್ಕೆ ಆಗಿದ್ದಾರೆ. ಮುಂದೆ



ನೇಪಾಳದಲ್ಲಿ ನಡೆಯಲಿರುವ ಅಂತರಾಷ್ಟ್ರೀಯ ಮಟ್ಟದ ಕ್ರೀಡಾಕೂಟದಲ್ಲಿ ಭಾರತಪರವಾಗಿ ಜೀಶಾನ್ ಪ್ರತಿನಿಧಿಸಲಿದ್ದಾರೆ. ಅಲ್ಲಿ ಏಷಿಯಾ ಖಂಡದ ಎಲ್ಲಾ ರಾಷ್ಟ್ರಗಳು ಭಾಗವಹಿಸುತ್ತಿದ್ದು, ಅಲ್ಲಿಯೂ ಕೂಡ ಜಿಶಾನ್ ಗೆಲುವು ಸಾಧಿಸಲಿ ಎಂದು ನಗರದ ಜನತೆ ಹಾರೈಸಿದ್ದಾರೆ. ಹಾಗೂ ಇವರನ್ನು ಮುದ್ದೇಬಿಹಾಳ ಟೈಮ್ ಪತ್ರಿಕೆ ಬಳಗ ಮತ್ತು ಕರ್ನಾಟಕ ಮುಸ್ಲಿಂ ಕೌನ್ಸಿಲ್ ಮತ್ತು ವಿವಿಧ ಪ್ರಗತಿಪರ ಸಂಘಟನೆಗಳು ಅಭಿನಂದಿಸಿವೆ.

ಇನ್ನು ಯೂಥ್ ಗೇಮ್ಸ್ ಕೌನ್ಸಿಲ್ ಇಂಡಿಯಾ ಆಯೋಜಿಸಿರುವ ಈ ಕ್ರೀಡಾಕೂಟ ರಾಷ್ಟ್ರೀಯ ಮತ್ತು ಅಂತರಾಷ್ಟ್ರೀಯ ಮಟ್ಟದಲ್ಲಿ ನಡೆಯುತ್ತಿದೆ. ಮುಂದೆ ಎಪ್ರಿಲ್ ಅಥವಾ ಮೇ. ತಿಂಗಳಲ್ಲಿ ನೆರೆ ರಾಷ್ಟ್ರ ನೇಪಾಳದಲ್ಲಿ ಅಂತರಾಷ್ಟ್ರೀಯ ಮಟ್ಟದ ಕ್ರೀಡಾ ಕೂಟಗಳು ನಡೆಯಲಿವೆ. ಈಗಾಗಲೇ ರಾಷ್ಟ್ರೀಯಮಟ್ಟದಲ್ಲಿ ಕರ್ನಾಟಕ ಪರವಾಗಿ ಭಾಗವಹಿಸಿ ಗೋಲ್ಡ್ ಮೆಡಲ್ ಪಡೆದುಕೊಂಡಿರುವ ಜೀಶಾನ್ ಮುಂದೆ ಅಂತರಾಷ್ಟ್ರೀಯ ಮಟ್ಟದ ಸ್ಪರ್ಧೆಯಲ್ಲಿ ಭಾಗವಹಿಸಿ ಅಲ್ಲಿಯೂ ಕೂಡ ಗೆಲವು ಸಾಧಿಸಿ ಕರ್ನಾಟಕದ ಕೀರ್ತಿ ಬೆಳಗಿಸಲಿ ಎಂದು ನಗರದ ಜನತೆ ಮತ್ತು ಅವರ ಕುಟುಂಬಸ್ಥರು, ಸಂಬಂಧಿಕರು ಶುಭ ಹಾರೈಸಿದ್ದಾರೆ. ಅದೇ ರೀತಿ ಸ್ಪರ್ಧೆಯಲ್ಲಿ ಭಾಗವಹಿಸಲು ಪ್ರೋತ್ಸಾಹಿಸಿದ ಬಸವ ಇಂಟರ್ನ್ಯಾಷನಲ್ ಸ್ಕೂಲ್ ಸಿಬಿಎಸ್‌ಸಿ ಈ ಶಾಲೆಯ ಪ್ರಿನ್ಸಿಪಾಲ್ ಪ್ರಭಾ ಚಿನಿವಾರ, ಶಾಲೆಯ ಚೇರ್ಮನರಾದ ಶಿವುಕುಮಾರ ಹರ್ಲಾಪುರ ಮತ್ತು ಸಿಬ್ಬಂದಿ ವರ್ಗ ಹಾಗೂ ಶಾಲೆಯ ದೈಹಿಕ ಶಿಕ್ಷಕರು ಹಾಗು ಕೋಚರ್ ಆದ ಸಿದ್ರಾಮ ಲಕ್ಷ್ಮಣ ಭಜಂತ್ರಿ ಗುರುಗಳಿಗೂ ಸಹ ನಗರದ ಸಾರ್ವಜನಿಕರು, ಜೀಶಾನ್ ಕುಟುಂಬಸ್ಥರು, ಸಂಬಂಧಿಕರು ಅಭಿನಂದಿಸಿದ್ದಾರೆ.

# ರಾಯಚೂರು ಉತ್ಸವದ ಪ್ರಚಾರಾರ್ಥ ಸಹಿ ಅಭಿಯಾನಕ್ಕೆ ಚಾಲನೆ






**ನೈಜ್ಯ ದೆಸೆ ನ್ಯೂಸ್**

**ರಾಯಚೂರು: ಜನವರಿ 23 (ಕರ್ನಾಟಕ ವಾರ್ತೆ): ಜಿಲ್ಲಾಡಳಿತ, ಜಿಲ್ಲಾ ಪಂಚಾಯತ್, ಮಹಾನಗರ ಪಾಲಿಕೆ ಹಾಗೂ ಕನ್ನಡ ಮತ್ತು ಸಂಸ್ಕೃತಿ ಇಲಾಖೆಯಿಂದ ಫೆ.5ರಿಂದ ಫೆ.7ರವರೆಗೆ ನಿಗದಿಯಾದ ಎಡೆದೊರೆ ನಾಡು ರಾಯಚೂರು ಜಿಲ್ಲಾ ಉತ್ಸವ-2026ರ ಪ್ರಚಾರಾರ್ಥ ಜನವರಿ 23ರಂದು ಸಹಿ ಅಭಿಯಾನ ಆರಂಭಗೊಂಡಿತು.**

ರಾಯಚೂರು ಸಿಟಿಯ ಎಲ್ ವಿಡಿ ಕಾಲೇಜಿನ ಹತ್ತಿರ ಇರುವ ಸರಕಾರಿ ಪಾಲಿಟೆಕ್ನಿಕ್ ಕಾಲೇಜಿನಲ್ಲಿ ಬೆಳಗ್ಗೆ ನಡೆದ ಸಹಿ ಅಭಿಯಾನಕ್ಕೆ ರಾಯಚೂರು ಮಹಾನಗರ ಪಾಲಿಕೆಯ ಉಪ ಆಯುಕ್ತರು ಹಾಗೂ ಪ್ರಚಾರ ಸಮಿತಿಯ ಅಧ್ಯಕ್ಷರಾದ ಸಂತೋಷ್ ರಾಣಿ ಅವರು ಚಾಲನೆ ನೀಡಿದರು. ಈ ವೇಳೆ, ಸಂತೋಷರಾಣಿ ಅವರು ಮಾತನಾಡಿ, ರಾಯಚೂರು ಉತ್ಸವದಲ್ಲಿ ವಿದ್ಯಾರ್ಥಿಗಳು ಸೇರಿದಂತೆ ಸಾರ್ವಜನಿಕರು ಸಕ್ರಿಯ ಭಾಗಿಯಾಗಬೇಕು. ಈ ಸಂಬಂಧ ವ್ಯಾಪಕವಾಗಿ ಜನತೆಗೆ ಮಾಹಿತಿ ರವಾನಿಸಲು ಸಹಿ ಅಭಿಯಾನ ಹಮ್ಮಿಕೊಂಡಿದ್ದೇವೆ ಎಂದು ತಿಳಿಸಿದರು. ಕಾಲೇಜಿನ ಪ್ರಾಚಾರ್ಯರಾದ ಶಿವಕುಮಾರ ಅವರು ಮಾತನಾಡಿ, ಇದು ನಮ್ಮೂರ ಉತ್ಸವ ಎಂದು ಭಾವಿಸಿ ವಿದ್ಯಾರ್ಥಿಗಳೊಂದಿಗೆ ತಪ್ಪದೇ ಭಾಗಿಯಾಗುವುದಾಗಿ ತಿಳಿಸಿದರು.


ಪ್ರಚಾರ ಸಮಿತಿಯ ಸದಸ್ಯ ಕಾರ್ಯದರ್ಶಿ ವಾರ್ತಾ ಇಲಾಖೆಯ ಗವಿಸಿದ್ದಪ್ಪ ಹೊಸಮನಿ ಅವರು ಮಾತನಾಡಿ, ಬಹುವರ್ಷಗಳ ನಂತರ ರಾಯಚೂರು ಉತ್ಸವ ನಿಗದಿಯಾಗಿದೆ. ಉತ್ಸವದಲ್ಲಿ ಕೃಷಿ ಮೇಳ, ಮತ್ಸ್ಯಮೇಳ, ಫಲಪುಷ್ಪ ಪ್ರದರ್ಶನ ಸೇ-ರಿದಂತೆ ನಾನಾ ಕಾರ್ಯಕ್ರಮಗಳು ಮತ್ತು ಸ್ಥಳೀಯ ಹಾಗೂ ರಾಜ್ಯಮಟ್ಟದ ಕಲಾವಿದ-ರಿಂದ ಪ್ರತಿ ದಿನ ಹಾಡು, ನೃತ್ಯ ಸೇರಿದಂತೆ ಅದ್ದೂರಿ ಕಾರ್ಯಕ್ರಮಗಳು ನಡೆಯಲಿವೆ. ವೆಬ್ ಸೈಟ್ ಸೇರಿದಂತೆ ಸಾಮಾಜಿ-ಕ ಜಾಲತಾಣಗಳ ಮೂಲಕ ಪ್ರಚಾರ ಕಾರ್ಯ ನಡೆಸಿದ್ದು ವಿದ್ಯಾರ್ಥಿಗಳು ತಪ್ಪದೆ ಹಾಜರಾಗಬೇಕು ಎಂದು ಮನವಿ ಮೂಡಿದರು. ಈ ಸಂದರ್ಭದಲ್ಲಿ ಪ್ರಚಾರ ಸಮಿತಿಯ ಸದಸ್ಯರಾದ ಕೌಶಲ್ಯಾಭಿವೃದ್ಧಿ ಇಲಾಖೆಯ ಅಧಿಕಾರಿಗಳಾದ ಸದಾಶಿವಪ್ಪ, ಪಾಲಿಕೆಯ ಅಧಿಕಾರಿಗಳಾದ ಕೃಷ್ಣ ಕಟ್ಟಿಮನಿ, ಅರಣ್ಯ ಇಲಾಖೆಯ ನಾಗರಾಜ್, ಗ್ರಂಥಾಲಯ ಇಲಾಖೆಯ ಮರೆಪ್ಪ, ರಾಜ್ಯ ಸರ್ಕಾರಿ ನೌಕರರ ವಿಮಾ ಇಲಾಖೆಯ ವಿಕ್ರಾಂತ ಇನ್ನಿತರ ಸದಸ್ಯರು ಹಾಗೂ ಕಾಲೇಜಿನ ಉಪನ್ಯಾಸಕರು ಮತ್ತು ವಿದ್ಯಾರ್ಥಿಗಳು ಇದ್ದರು.

# ಜಿಲ್ಲಾಡಳಿತದಿಂದ ಜನವರಿ 27ರಂದು ಸವಿತಾ ಮಹರ್ಷಿ ಜಯಂತಿ

**ನೈಜ್ಯ ದೆಸೆ ನ್ಯೂಸ್**

**ರಾಯಚೂರು: ಇಲ್ಲಿನ ಜಿಲ್ಲಾಡಳಿತ, ಜಿಲ್ಲಾ ಪಂಚಾಯತ್, ರಾಯಚೂರು ಮಹಾನಗರ ಪಾಲಿಕೆ ಹಾಗೂ ಕನ್ನಡ ಮತ್ತು ಸಂಸ್ಕೃತಿ ಇಲಾಖೆಗಳ ಸಂಯುಕ್ತಾಶ್ರಯದಲ್ಲಿ ಸವಿತಾ ಮಹರ್ಷಿ ಜಯಂತಿ ಕಾರ್ಯಕ್ರಮವು ನಗರದ ಪಂಡಿತ ಸಿದ್ಧರಾಮ ಜಂಬಲದಿನ್ನಿ ರಂಗಮಂದಿರದಲ್ಲಿ ಜನವರಿ 27ರ ಬೆಳಿಗ್ಗೆ 11ಕ್ಕೆ ಹಮ್ಮಿಕೊಳ್ಳಲಾಗಿದೆ.**

ವೈದ್ಯಕೀಯ ಶಿಕ್ಷಣ ಹಾಗೂ ಕೌಶಲ್ಯಾಭಿವೃದ್ಧಿ ಉದ್ಯಮಶೀಲತೆ ಮತ್ತು ಜೀವನೋಪಾಯ ಸಚಿವರು ಹಾಗೂ ರಾಯಚೂರು ಜಿಲ್ಲಾ ಉಸ್ತುವಾರಿ ಸಚಿವರಾದ ಡಾ.ಶರಣಪ್ರಕಾಶ್ ರುದ್ರಪ್ಪ ಪಾಟೀಲ್ ಅವರು ಉದ್ಘಾಟನೆ ನೆರವೇರಿಸುವರು. ಸಣ್ಣ ನೀರಾವರಿ, ವಿಜ್ಞಾನ ಮತ್ತು ತಂತ್ರಜ್ಞಾನ ಸಚಿವರಾದ ಎನ್.ಎಸ್.ಬೋಸರಾಜು ಅವರು ಘನ ಉಪಸ್ಥಿತಿ ವಹಿಸುವರು. ರಾಯಚೂರು ನಗರ ಕ್ಷೇತ್ರದ ಶಾಸಕರಾದ ಡಾ.ಎಸ್.ಶಿವರಾಜ ಪಾಟೀಲ್ ಅವರು ಅಧ್ಯಕ್ಷತೆ ವಹಿಸುವರು. ಮುಖ್ಯ ಅತಿಥಿಗಳಾಗಿ



ಕರ್ನಾಟಕ ಪರಿಶಿಷ್ಟ ಪಂಗಡಗಳ ಅಭಿವೃದ್ಧಿ ನಿಗಮದ ಅಧ್ಯಕ್ಷರು ಆಗಿರುವ ರಾಯಚೂರು ಗ್ರಾಮಾಂತರ ಕ್ಷೇತ್ರದ ಶಾಸಕರಾದ ಬಸನಗೌಡ ದದ್ದಲ್, ಕರ್ನಾಟಕ ರಾಜ್ಯ ಖಾದಿ ಮತ್ತು ಗ್ರಾಮೋದ್ಯೋಗ ಮಂಡಳಿ ಅಧ್ಯಕ್ಷರು ಆಗಿರುವ ಮಸ್ಕಿ ಕ್ಷೇತ್ರದ ಶಾಸಕರಾದ ಆರ್.ಬಸನಗೌಡ ತುರ್ವಿಹಾಳ, ಕರ್ನಾಟಕ ರಾಜ್ಯ ಕೈಗಾ-ರಿಕಾ ಮೂಲಸೌಲಭ್ಯ ಅಭಿವೃದ್ಧಿ ನಿಗಮದ ಅಧ್ಯಕ್ಷರು ಆಗಿರುವ ಸಿಂಧನೂರು ಕ್ಷೇತ್ರದ ಶಾಸಕರಾದ ಹಂಪನಗೌಡ ಬಾದರ್ಲಿ,

ಹಟ್ಟಿ ಚಿನ್ನದ ಗಣಿ ನಿಯಮಿತದ ಅಧ್ಯಕ್ಷರು ಆಗಿರುವ ಬೀಳಗಿ ಕ್ಷೇತ್ರದ ಶಾಸಕರಾದ ಜೆ.ಟಿ.ಪಾಟೀಲ್, ರಾಯಚೂರು ಲೋಕಸಭಾ ಸದಸ್ಯರಾದ ಜಿ.ಕುಮಾರ ನಾಯಕ, ಕೊಪ್ಪಳ ಲೋಕಸಭಾ ಸಂಸದರಾದ ಕೆ.ರಾಜಶೇಖರ ಹಿಟ್ನಾಳ, ವಿಧಾನ ಪರಿಷತ್ ಶಾಸಕರಾದ ಶಶೀಲ್ ಜಿ.ನಮೋಷಿ, ಮಾನವಿ ಕ್ಷೇತ್ರದ ಶಾಸಕರಾದ ಜಿ.ಹಂಪಯ್ಯ ನಾಯಕ, ಲಿಂಗಸಗೂರು ಕ್ಷೇತ್ರದ ಶಾಸಕರಾದ ಮಾನಪ್ಪ ಡಿ.ವಜ್ಜಲ್, ವಿಧಾನ ಪರಿಷತ್ ಶಾಸಕರಾದ ಚಂದ್ರಶೇಖರ್ ಬಿ.ಪಾಟೀಲ್, ದೇವದುರ್ಗ ಕ್ಷೇತ್ರದ ಶಾಸಕರಾದ ಕರೆಮ್ಮ ಜಿ.ನಾಯಕ, ವಿಧಾನ ಪರಿಷತ್ ಶಾಸಕರಾದ ಶರಣಗೌಡ ಪಾಟೀಲ ಬಯ್ಯಾಪುರ,

ಎ.ವಸಂತಕುಮಾರ, ಬಸನಗೌಡ ಬಾದರ್ಲಿ, ಕೃಷಿ ಉತ್ಪನ್ನ ಮಾರುಕಟ್ಟೆ ಸಮಿತಿ ಅಧ್ಯಕ್ಷರಾದ ಮಲ್ಲಿಕಾರ್ಜುನ ಗೌಡ, ನಗರಾಭಿವೃದ್ಧಿ ಪ್ರಾಧಿಕಾರದ ಅಧ್ಯಕ್ಷರಾದ ರಾಜಶೇಖರ ರಾಮಸ್ವಾಮಿ, ಜಿಲ್ಲಾ ಮಟ್ಟದ ಗ್ಯಾರಂಟಿ ಯೋಜನೆಗಳ ಅನುಷ್ಠಾನ ಸಮಿತಿಯ ಅಧ್ಯಕ್ಷರಾದ ಪಾಮಯ್ಯ ಮುರಾರಿ, ರಾಯಚೂರು ತಾಲೂಕು ಗ್ಯಾರಂಟಿ ಯೋಜನೆಗಳ ಅನುಷ್ಠಾನ ಸಮಿತಿಯ ಅಧ್ಯಕ್ಷರಾದ ಪವನ್ ಕಿಶೋರ್ ಪಾಟೀಲ್, ಆರ್ಥಿಕ ಇಲಾಖೆಯ ಸರ್ಕಾರದ ಪ್ರಧಾನ ಕಾರ್ಯದರ್ಶಿಗಳು ಹಾಗೂ ರಾಯಚೂರು ಜಿಲ್ಲಾ ಉಸ್ತುವಾರಿ ಕಾರ್ಯದರ್ಶಿಗಳಾದ ರಿತೇಶಕುಮಾರ ಸಿಂಗ್, ಕಲಬುರಗಿ ವಿಭಾಗದ ಪ್ರಾದೇಶಿಕ ಆಯುಕ್ತರಾದ ಜಹೀರಾ ನಸೀಮ್,

ಜಿಲ್ಲಾಧಿಕಾರಿಗಳಾದ ನಿತೀಶ್ ಕೆ., ಜಿಲ್ಲಾ ಪಂಚಾಯತ್ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಗಳಾದ ಈಶ್ವರ ಕುಮಾರ್ ಕಾಂದೂ, ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿಗಳಾದ ಅರುಣಾಂಗ್ಶು ಗಿರಿ., ರಾಯಚೂರು ಮಹಾನಗರ ಪಾಲಿಕೆಯ ಆಯುಕ್ತರಾದ ಜುಬಿನ್ ಮೊಹಪಾತ್ರ ಅವರು ಸೇರಿದಂತೆ ಇತರರು ಕಾರ್ಯಕ್ರಮದಲ್ಲಿ ಬಾಗಿಯಾಗಲಿದ್ದಾರೆ. ಹಿರಿಯ ಸಾಹಿತಿಗಳಾದ ವೀರಹನುಮಾನ ಅವರು ಸವಿತಾ ಮಹರ್ಷಿ ಜಯಂತಿ ಕುರಿತು ಉಪನ್ಯಾಸ ನೀಡಲಿದ್ದಾರೆ ಎಂದು ಕನ್ನಡ ಮತ್ತು ಸಂಸ್ಕೃತಿ ಇಲಾಖೆಯ ಸಹಾಯಕ ನಿರ್ದೇಶಕರಾದ ಉತ್ತರಾದೇವಿ ಅವರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ಇಲಾಖಾವಾರು ಕಾಮಗಾರಿಗಳನ್ನು ಮಾರ್ಚ್ ಅಂತ್ಯದೊಳಗೆ ಪೂರ್ಣಗೊಳಿಸಿ ಬಜೆಟ್ ಲ್ಯಾಪ್ಸ್ ಆಗದಂತೆ ಎಚ್ಚರಿಕೆ

**ನೈಜ್ಯ ದೆಸೆ ನ್ಯೂಸ್**

**ಮುದ್ದೇಬಿಹಾಳ: ತಾಲ್ಲೂಕಿನ ವಿವಿಧ ಇಲಾಖೆಗಳ ಕ್ರಿಯಾ ಯೋಜನೆಗಳನ್ನು ತಕ್ಷಣ ಸಿದ್ಧಪಡಿಸಿ, ಮಂಜೂರಾದ ಅನುದಾನವನ್ನು ಸಮರ್ಪಕವಾಗಿ ಬಳಸುವ ಮೂಲಕ ಬಜೆಟ್ ಲ್ಯಾಪ್ಸ್ ಆಗದಂತೆ ನೋಡಿಕೊಳ್ಳಬೇಕು. ಜಿಲ್ಲಾ ಪಂಚಾಯತ್ ಹಾಗೂ ತಾಲ್ಲೂಕು ಪಂಚಾಯತ್ ಅನುದಾನದಡಿ ಕೈಗೊಂಡಿರುವ ಎಲ್ಲಾ ಕಾಮಗಾರಿಗಳ ಭೌತಿ-ಕ ಪ್ರಗತಿಯನ್ನು ಇಲಾಖಾವಾರು ಪರಿಶೀಲಿಸಿ, ಮಾರ್ಚ್ ಅಂತ್ಯದೊಳಗೆ ಪೂರ್ಣಗೊಳಿಸುವಂತೆ ಎಲ್ಲಾ ಇಲಾಖೆ ಅಧಿಕಾರಿಗಳಿಗೆ ಸೂಚನೆ ನೀಡಲಾಗಿದೆ ಎಂದು ತಾಲ್ಲೂಕು ಆಡಳಿತಾಧಿಕಾ-ರಿಯೂ ಆಗಿರುವ ವಿಜಯಪುರ ಕೃಷಿ ಜಂಟಿ ನಿರ್ದೇಶಕ ಶಿವನಗೌಡ ಎಸ್. ಪಾಟೀಲ ತಿಳಿಸಿದ್ದಾರೆ.**

ಪಟ್ಟಣದ ತಾಲ್ಲೂಕು ಪಂಚಾಯತ್ ಸಭಾಭವನದಲ್ಲಿ ಮಂಗಳವಾರ ನಡೆದ 2025?26ನೇ ಸಾಲಿನ ತಾಲ್ಲೂಕು ಪಂಚಾಯತ್ ಕೆಡಿಪಿ ಹಾಗೂ ಸಾಮಾನ್ಯ ಸಭೆಯ ಅಧ್ಯಕ್ಷತೆ ವಹಿಸಿ ಅವರು ಮಾತನಾಡಿದರು. ಒಪ್ಪಿಗೆ ಪಡೆದುಕೊಂಡ ಕಾಮಗಾರಿಗಳನ್ನು ಏಕಾಏಕಿ ಬದಲಾವಣೆ ಮಾಡದೇ, ಅನಿವಾರ್ಯ ಕಾರಣಗಳಿದ್ದಲ್ಲಿ ಸಂಬಂಧಪಟ್ಟ ಅಧಿಕಾರಿಗಳ ಗಮನಕ್ಕೆ ತಂದು ಅನುಮತಿ ಪಡೆದು ಮಾತ್ರ ಬದಲಾವಣೆ ಮಾಡಬೇಕು. ಕಾಮಗಾರಿ ಕೈಗೊಂಡ ಬಳಿಕ ಯಾವುದೇ ಕಾರಣಕ್ಕೂ ವಿಳಂಬಕ್ಕೆ ಅವಕಾಶ ನೀಡಬಾರದು ಎಂದು ಕಟ್ಟುನಿಟ್ಟಾಗಿ ಹೇಳಿದರು. ಅಧಿಕಾರಿಗಳು ಸಭೆಗೆ ಸಮರ್ಪಕ ಮಾಹಿತಿ ಒದಗಿಸಬೇಕು. ಕೇವಲ ಅಂಕಿ?ಅಂಶಗಳಲ್ಲದೆ ನೆಲಮಟ್ಟದ ವಾಸ್ತವ ಸ್ಥಿತಿಯನ್ನೂ ಸಭೆಗೆ ಸ್ಪಷ್ಟಪಡಿಸಬೇಕು ಎಂದು ಅವರು ಸೂಚಿಸಿದರು.



ಕೃಷಿ ಪರಿಸ್ಥಿತಿ ಮತ್ತು ಬೆಳೆ ಹಾನಿ. ಸಭೆಯಲ್ಲಿ ಕೃಷಿ ಇಲಾಖೆ ಅಧಿಕಾರಿ ಎಸ್.ಡಿ. ಬಾವಿಕಟ್ಟಿ ಮಾಹಿತಿ ನೀಡುತ್ತಾ, ಮುದ್ದೇಬಿಹಾಳ, ನಾಲತವಾಡ, ಢವಳಗಿ ಹಾಗೂ ತಾಳಿಕೋಟಿ ಭಾಗಗಳಲ್ಲಿ ಗೋಧಿ, ಜೋಳ, ಕಡಲೆ ಸೇರಿದಂತೆ ಹಿಂಗಾರು ಬೆಳೆಗಳು ಉತ್ತಮವಾಗಿ ಬಂದಿವೆ. ಆದ-'ರೆ ಕೆಲವೆಡೆ ಅತಿವೃಷ್ಟಿಯಿಂದ ಬೆಳೆ ಹಾನಿಯಾಗಿದೆ. ಇದಕ್ಕೆ ಸಂಬಂಧಿಸಿದಂತೆ ಸರ್ಕಾರ ಈಗಾಗಲೇ ಬೆಳೆ ವಿಮೆ ಜಮಾ ಮಾಡಿದೆ ಎಂದು ತಿಳಿಸಿದರು. ತಾಲ್ಲೂಕಿನಲ್ಲಿ ಕಬ್ಬು ಬೆಳೆ ಹೆಚ್ಚಾಗಿದ್ದು, ರಸಗೊಬ್ಬರ ಹಾಗೂ ಬೀಜಗಳ ಕೊರತೆ ಇಲ್ಲ. ಬೇಸಿಗೆ ಹಂಗಾಮಿನಲ್ಲಿ ಶೇಂಗಾ ಬೆಳೆಯಲು ರೈತರು ಮುಂದಾಗಿದ್ದಾರೆ ಎಂದರು.

ನಾಯಿ ಕಡಿತ ಪ್ರಕರಣಗಳ ಏರಿಕೆ. ಆರೋಗ್ಯ ಇಲಾಖೆಯ ಮಾಹಿತಿ ಪ್ರಕಾರ ತಾಲ್ಲೂಕಿನಲ್ಲಿ ನಾಯಿ ಕಡಿತ ಪ್ರಕರಣಗಳು ಆತಂಕಕಾರಿ ಮಟ್ಟ ತಲುಪಿದ್ದು, ಒಟ್ಟು 3,240 ಪ್ರಕರಣಗಳು ವರದಿಯಾಗಿವೆ. ಮುದ್ದೇಬಿಹಾಳದಲ್ಲಿ 1,200, ತಾಳಿಕೋಟಿಯಲ್ಲಿ 840 ಪ್ರಕರಣಗಳು ದಾಖಲಾಗಿದ್ದು, ಢವಳಗಿ, ಹಿರೂರ, ತಮದಡ್ಡಿ ಭಾಗಗಳಲ್ಲೂ ಪ್ರಕರಣಗಳು ಹೆಚ್ಚಿವೆ. ಹಾವು ಕಡಿತ ಪ್ರಕರಣಗಳು 140ಕ್ಕೆ ಏರಿಕೆಯಾಗಿದೆ.

ತಾಳಿಕೋಟಿ ತಾಲ್ಲೂಕಿನ ಶಿವಪುರ ಗ್ರಾಮದಲ್ಲಿ ಆನೆಕಾಲು ರೋಗ ಪತ್ತೆಯಾಗಿದ್ದು, ರೋಗಿಗಳಿಗೆ ಸೂಕ್ತ ಚಿಕಿತ್ಸೆ ನೀಡಲಾಗಿದೆ. ಮಲೇ-ರಿಯಾ, ಡೆಂಗ್ಯೂ, ಚಿಕನ್‌ಗುನ್ನಿಯಾ ನಿಯಂತ್ರಣ-ಕ್ಕೆ ಕ್ರಮ ಕೈಗೊಳ್ಳಲಾಗಿದೆ. ಟಿಬಿ ಮುಕ್ತ ಗು-ರಿಯನ್ನೂ ಇಲಾಖೆ ಹಮ್ಮಿಕೊಂಡಿದೆ ಎಂದು ಡಾ. ಎಸ್.ಬಿ. ತಿವಾರಿ ಸಭೆಗೆ ಮಾಹಿತಿ ನೀಡಿದರು. 14?15 ವರ್ಷದ ಶಾಲಾ ಮಕ್ಕಳಿಗೆ ಮುಂಜಾಗ್ರತಾ ಕ್ರಮವಾಗಿ ಉಚಿತ ಕ್ಯಾನ್ಸರ್ ಲಸಿಕೆ ನೀಡಲಾಗುತ್ತಿದೆ ಎಂದು ಅವರು ಹೇಳಿದರು. ನಾಯಿ ಕಡಿತ ಪ್ರಕರಣಗಳ ಹೆಚ್ಚಳದ ಕು-ರಿತು ಗಂಭೀರವಾಗಿ ಪ್ರತಿಕ್ರಿಯಿಸಿದ ತಾಲ್ಲೂಕು ಆಡಳಿತಾಧಿಕಾರಿ, ಹೈಕೋರ್ಟ್ ಸೂಚನೆಗಳಂತೆ ಬೀದಿ ನಾಯಿಗಳ ನಿಯಂತ್ರಣಕ್ಕೆ ತಕ್ಷಣ ಕ್ರಮ ಕೈಗೊಳ್ಳುವಂತೆ ಪುರಸಭೆ ಮುಖ್ಯಾಧಿಕಾರಿ ವಿನೋದ ಜಿಂಗಾಡೆ ಅವರಿಗೆ ಸೂಚಿಸಿದರು. ಇದಕ್ಕೆ ಉತ್ತರಿಸಿದ ಮುಖ್ಯಾಧಿಕಾರಿ, ಟೆಂಡರ್ ಪ್ರಕ್ರಿಯೆ ಮೂಲಕ ಕ್ರಮ ಜರುಗಿಸಲಾಗುವುದು ಎಂದು ಸಭೆಗೆ ತಿಳಿಸಿದರು.

ಅಂಗನವಾಡಿ ಆಹಾರ ಅನುದಾನ ಸಮಸ್ಯೆ. ಅಂಗನವಾಡಿ ಕೇಂದ್ರಗಳಿಗೆ ಸರ್ಕಾರದ ಎಲ್ಲಾ ಯೋಜನೆಗಳು ಜಾರಿಯಲ್ಲಿದ್ದರೂ, ಹಿಂದಿನ ಮುಖ್ಯಮಂತ್ರಿ ಬಸವರಾಜ ಬೊಮ್ಮಾಯಿ ಅವರ ಅವಧಿಯಲ್ಲಿ ಪ್ರಾರಂಭವಾದ ಕೆಲವು ಹೊಸ ಅಂಗನವಾಡಿ ಕೇಂದ್ರಗಳಿಗೆ ಆಹಾರ ಅನುದಾನ ಸಂಪೂರ್ಣವಾಗಿ ಬರುತ್ತಿಲ್ಲ ಎಂದು ತಾಲ್ಲೂಕು ಶಿಶು ಅಭಿವೃದ್ಧಿ ಯೋಜನಾ ಅಧಿಕಾರಿ ಶಿವಮೂರ್ತಿ ಕುಂಬಾರ ಸಭೆಗೆ ಮಾಹಿತಿ ನೀಡಿದರು.

ಕೃಷ್ಣಾ ನದಿಯಲ್ಲಿ ಅಕ್ರಮ ಮೀನುಗಾರಿಕೆ. ಮದರಿ ಗ್ರಾಮದಿಂದ ಘಾಳಪೂಜಿ ಗ್ರಾಮದ ಕೃಷ್ಣಾ ನದಿ ತೀರದಲ್ಲಿ ಆಂಧ್ರ ಪ್ರದೇಶದಿಂದ ಬಂದಿರುವ ಕೆಲವರು ರಾತ್ರಿ ವೇಳೆ ಅಕ್ರಮ ಮೀನುಗಾರಿಕೆಯಲ್ಲಿ ತೊಡಗಿರುವ ಬಗ್ಗೆ ಮಾಹಿತಿ ಬಹಿರಂಗಪಡಿಸಲಾಯಿತು. ಕಳೆದ ಭಾನುವಾರ ದಿಢೀರ್ ದಾಳಿ ನಡೆಸಿ, ಠಾಣೆಯಲ್ಲಿ ದೂರು ದಾಖಲಿಸಲಾಗಿದೆ ಎಂದು ಮೀನುಗಾರಿಕೆ ಇಲಾಖೆಯ ಸಹಾಯಕ ನಿರ್ದೇಶಕ ಬಿರಾದಾರ ತಿಳಿಸಿದರು.

ಸಣ್ಣ ಮೀನುಗಳನ್ನು ಬಲೆ ಬೀಸಿ ಹಿಡಿದುಕೊಂಡು ಹೋಗುತ್ತಿರುವುದರಿಂದ ಮೀನುಗಳ ಸಂತತಿ ಗಣನೀಯವಾಗಿ ಕುಸಿಯುವ ಭೀತಿ ಎದುರಾಗಿತ್ತು. ಈ ಹಿನ್ನೆಲೆಯಲ್ಲಿ ಬೆಳಗಾವಿಯ ಜಂಟಿ ನಿರ್ದೇಶಕರ ಸಹಕಾರದೊಂದಿಗೆ ಅಕ್ರಮ ಅಡ್ಡೆಗಳ ಮೇಲೆ ದಾಳಿ ನಡೆಸಲಾಗಿದೆ. ಹಲವರ ವಿರುದ್ಧ ಪ್ರಕರಣ ದಾಖಲಾಗಿದೆ ಎಂದರು. ನದಿ ತೀರದಲ್ಲಿ ಅನಧಿಕೃತ ಶೆಡ್ ಹಾಗೂ ಟೆಂಟ್‌ಗಳಿಗೆ ಕಡಿವಾಣ ಹಾಕಲು ಗ್ರಾಮ ಪಂಚಾಯತ್ ಪಿಡಿಒಗಳಿಗೆ ಸೂಚನೆ ನೀಡಬೇಕು ಎಂದು ಅವರು ಮನವಿ ಮಾಡಿದರು. ಇದಕ್ಕೆ ಪ್ರತಿಕ್ರಿಯಿಸಿದ ತಾಪಂ ಇಒ ವೆಂಕಟೇಶ್ ವಂದಾಲ, ತಕ್ಷಣವೇ ಪಿಡಿಒಗಳಿಗೆ ಸೂಚನೆ ನೀಡಲಾಗುವುದು ಎಂದು ತಿಳಿಸಿದರು.

ಎಸ್‌ಎಸ್‌ಎಲ್‌ಸಿ ಫಲಿತಾಂಶ ಸುಧಾರಣೆಗೆ ಸೂಚನೆ. ಶಿಕ್ಷಣ ಇಲಾಖೆಯ ಚರ್ಚೆಯಲ್ಲಿ ಎಸ್‌ಎಸ್-ಎಲ್‌ಸಿ ಫಲಿತಾಂಶ ಸುಧಾರಣೆಗೆ ಹೆಚ್ಚಿನ ಆದ-'ತೆ ನೀಡುವಂತೆ ಬಿಇಒಗೆ ಸೂಚಿಸಲಾಯಿತು. ಸರ್ಕಾರಿ ಶಾಲೆಗಳಲ್ಲಿ ನುರಿತ ಶಿಕ್ಷಕರು ಇದ್ದರೂ ಫಲಿತಾಂಶ ಕಳಪೆಯಾಗುತ್ತಿರುವುದು ಏಕೆ ಎಂಬ ಪ್ರಶ್ನೆ ಸಭೆಯಲ್ಲಿ ಕೇಳಿಬಂತು. ಇದಕ್ಕೆ ಉತ್ತರಿಸಿದ ಬಿಇಒ ಬಿ.ಎಸ್. ಸಾವಳಗಿ, ಜಿಲ್ಲೆಯಲ್ಲಿ ತಾಲ್ಲೂಕು ಎರಡನೇ ಸ್ಥಾನದಲ್ಲಿದೆ.

ಫಲಿತಾಂಶ ಸುಧಾರಣೆಗೆ ಫೋನ್-ಇನ್, ಪಾಸಿಂಗ್ ಪ್ಯಾಕೇಜ್, ಮನೆ ಸಂದರ್ಶನ ಸೇರಿದಂತೆ ಹಲವು ಕ್ರಮಗಳನ್ನು ಕೈಗೊಳ್ಳಲಾಗಿದೆ ಎಂದರು. ಇಂಟರ್ನಲ್ ಅಂಕಗಳನ್ನು ಪೂರ್ಣವಾಗಿ ನೀಡುವಂತೆ ಸೂಚಿಸಲಾಗಿದೆ. ಥಿಯರಿ ಪರೀಕ್ಷೆಯಲ್ಲಿ 80ಕ್ಕೆ 13 ಅಂಕ ಪಡೆದರೂ ವಿದ್ಯಾರ್ಥಿ ಉತ್ತೀರ್ಣರಾಗುವ ಅವಕಾಶವಿದೆ. ಉತ್ತೀರ್ಣತೆಗೆ ಕನಿಷ್ಠ 33 ಅಂಕ ನಿಗದಿಯಾಗಿದೆ ಎಂದು ತಿಳಿಸಿದರು. ಅನುದಾನಿತ ಶಾಲೆಗಳಲ್ಲಿ ಶಿಕ್ಷಕರ ಕೊರತೆಯಿಂದ ಫಲಿತಾಂಶ ಕುಸಿತವಾಗಿದೆ ಎಂದು ಮಾಹಿತಿ ನೀಡಿದರು. ತೋಟಗಾರಿಕೆ ಮಾಹಿತಿ ತೋಟಗಾರಿಕೆ ಇಲಾಖೆಯ ಸಹಾಯಕ ನಿರ್ದೇಶಕ ಸಂತೋಷ ದೇಶಪಾಂಡೆ ಮಾತನಾಡಿ, ದ್ರಾಕ್ಷಿ, ನಿಂಬೆ ಹಾಗೂ ಈರುಳ್ಳಿ ಕೋಲ್ಡ್ ಸ್ಟೋರೇಜ್‌ಗೆ ಪ್ರತಿ ಘಟಕಕ್ಕೆ 1 ಲಕ್ಷ ರೂ. ಸಹಾಯಧನ ನೀಡಲಾಗುತ್ತಿದೆ ಎಂದರು. ತಾಲ್ಲೂಕಿನಲ್ಲಿ 250 ಹೆಕ್ಟೇರ್ ಪ್ರದೇಶದಲ್ಲಿ ಅಜವಾನ ಬೆಳೆ ಬೆಳೆಯಲಾಗುತ್ತಿದ್ದು, ಮಾರುಕಟ್ಟೆ ಕೊರತೆಯಿಂದ ರೈತರು ಆಸಕ್ತಿ ಕಳೆದುಕೊಳ್ಳುತ್ತಿದ್ದಾರೆ. ಅಜವಾನವನ್ನು ಕರ್ನೂಲ್‌ಗೆ ರೈತರೇ ತೆಗೆದುಕೊಂಡು ಹೋಗಬೇಕಾದ ಸ್ಥಿತಿ ಇದೆ ಎಂದು ಸಭೆಗೆ ತಿಳಿಸಿದರು. ಸಭೆಗೆ ಉಪಸ್ಥಿತಿ ಸಭೆಯಲ್ಲಿ ತಾಪಂ ಇಒ ವೆಂಕಟೇಶ್ ವಂದಾಲ, ತಾಳಿಕೋಟಿ ತಾಪಂ ಇಒ ಅನಸೂಯಾ ಚಲವಾದಿ, ಯೋಜನಾಧಿಕಾರಿ ಪಿ.ಎಸ್. ಕಸನಕ್ಕಿ, ಲೆಕ್ಕಾಧಿಕಾರಿ ವೀರೇಶ ಹೂಗಾರ ಸೇರಿದಂತೆ ವಿವಿಧ ಇಲಾಖೆಗಳ ಅಧಿಕಾ-ರಿಗಳಾದ ವಿ.ಎಸ್. ಉತ್ನಾಳ, ಬಸಂತಿ ಮಠ, ಸಿಡಿಪಿಒ ಶಿವಮೂರ್ತಿ ಕುಂಬಾರ, ಶಿವಾನಂದ ಮೇಟಿ ಹಾಗೂ ಇತರರು ಉಪಸ್ಥಿತರಿದ್ದರು.